ಸಂಪುಟ : 10 ಸಂಚಿಕೆ: 236 ಪುಟ : 4+2 ಬೆಲೆ: 3.00 ಶುಕ್ರವಾರ ಅಕ್ಟೋಬರ್ 31 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 236 Pages : 4+2 Price : 3.00 Friday October 31 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25


### 2019ರ ಸಾಲಿನ ರಾಜ್ಯ ಚಲನಚಿತ್ರ ಜೀವಮಾನ ಸಾಧನೆ, ಸಾಹಿತ್ಯ, ಅತ್ಯುತ್ತಮ ಕಿರುಚಿತ್ರ ಪ್ರಶಸ್ತಿ ಪ್ರಕಟ

# ನವೆಂಬರ್ 3ರಂದು ಮೈಸೂರಿನಲ್ಲಿ ಪ್ರಶಸ್ತಿ ಪ್ರದಾನ









■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಚಲನಚಿತ್ರ ರಂಗದಲ್ಲಿನ ಜೀವಮಾನ ಸಾಧನೆಗೆ ನೀಡುವ ಡಾ. ರಾಜಕುಮಾರ್ ಪ್ರಶಸ್ತಿ, ಪುಟ್ಟಣ್ಣ ಕಣಗಾಲ್ ಪ್ರಶಸ್ತಿ ಹಾಗೂ ಡಾ. ವಿಷ್ಣುವರ್ಧನ್ ಪ್ರಶಸ್ತಿ, ವಾರ್ಷಿಕ ಸಾಹಿತ್ಯ ಮತ್ತು ಕಿರುಚಿತ್ರ ಪ್ರಶಸ್ತಿಗಳಿಗೆ 2019ನೇ ಸಾಲಿನ ಪುರಸ್ಕೃತರನ್ನು ಆಯ್ಕೆ ಮಾಡಿ ಸರ್ಕಾರ ಆದೇಶ ಹೊರಡಿಸಿದೆ. ನವೆಂಬರ್ 3ರಂದು ಮೈಸೂರಿನಲ್ಲಿ ಆಯೋಜಿಸಿರುವ 2018 ಹಾಗೂ 2019ರ ಕ್ಯಾಲೆಂಡರ್ ವರ್ಷಗಳ ರಾಜ್ಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಈ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುವುದು.

ಕನ್ನಡ ಚಿತ್ರರಂಗದಲ್ಲಿನ ಜೀವಮಾನ ಸಾಧನೆಗೆ ನೀಡುವ ಡಾ. ರಾಜಕುಮಾರ್ ಪ್ರಶಸ್ತಿಗೆ ಸಿನಿಮಾ ಮತ್ತು ರಂಗಭೂಮಿಯ ಹಿರಿಯ ನಟಿ ಉಮಾಶ್ರೀ, ಪುಟ್ಟಣ್ಣ ಕಣಗಾಲ್ ಪ್ರಶಸ್ತಿಗೆ ಎನ್.ಆರ್. ನಂಜುಂಡೇಗೌಡ ಹಾಗೂ ಡಾ. ವಿಷ್ಣುವರ್ಧನ್ ಪ್ರಶಸ್ತಿಗೆ ರಿಚಾರ್ಡ್ ಕ್ಯಾಸ್ಟಲಿನೋ ಅವರು ಆಯ್ಕೆಯಾಗಿದ್ದಾರೆ. ಈ ಮೂರು ಪ್ರಶಸ್ತಿಗಳು ತಲಾ ಐದು ಲಕ್ಷ ರೂ ನಗದು ಹಾಗೂ 50 ಗ್ರಾಂ ಚಿನ್ನದ ಪದಕ ಒಳಗೊಂಡಿದೆ.

2019ರ ಅತ್ಯುತ್ತಮ ಕಿರುಚಿತ್ರ ಪ್ರಶಸ್ತಿಗೆ ಶ್ರೀನಾಥ್ ಎಸ್.ಹಡಗಲಿ ನಿರ್ದೇಶನದ 'ಗುಳೆ' ಕಿರುಚಿತ್ರವು ಆಯ್ಕೆಯಾಗಿದೆ. ಮನೋಹರ್ ಎಸ್. ಐಯ್ಯರ್ ನಿರ್ಮಿಸಿರುವ ಈ ಚಿತ್ರದ ನಿರ್ದೇಶಕರು ಮತ್ತು ನಿರ್ಮಾಪಕರಿಗೆ ತಲಾ 25 ಸಾವಿರ ರೂ. ನಗದು ಹಾಗೂ 50 ಗ್ರಾಂ ಬೆಳ್ಳಿ ಪದಕ ನೀಡಿ ಗೌರವಿಸಲಾಗುತ್ತಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ಎಂ.ನಿಂಬಾಳ್ಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಉಮಾಶ್ರೀ

ಉಮಾಶ್ರೀ ಕನ್ನಡ ರಂಗಭೂಮಿ ಮತ್ತು ಚಿತ್ರರಂಗದ ಒಬ್ಬ ಪ್ರತಿಭಾವಂತ ನಟಿ, ನಿರ್ದೇಶಕಿ ಮತ್ತು ರಾಜಕಾರಣಿಯಾಗಿದ್ದಾರೆ. ಬಾಲ್ಯದಲ್ಲಿಯೇ ರಂಗಭೂಮಿಯಲ್ಲಿ ಅಭಿನಯವನ್ನು ಪ್ರಾರಂಭಿಸಿದ ಇವರು 1980ರ ದಶಕದಲ್ಲಿ 'ಅನುಭವ' ಚಿತ್ರದ ಮೂಲಕ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದರು. ಒಟ್ಟಾರೆಯಾಗಿ 200ಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿರುವ ಉಮಾಶ್ರೀ, ಕನ್ನಡ ಚಿತ್ರರಂಗದ ಒಂದು ದಂತ ಕತೆಯಾಗಿದ್ದಾರೆ. ಉಮಾಶ್ರೀ ಎರಡು ಬಾರಿ ಕರ್ನಾಟಕ ರಾಜ್ಯ ಚಲನಚಿತ್ರ ಪ್ರಶಸ್ತಿಗೆ ಭಾಜನರಾಗಿದ್ದಾರೆ. 'ಗುಲಾಬಿ ಟಾಕೀಸ್' ಚಿತ್ರಕ್ಕಾಗಿ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಯನ್ನೂ ಪಡೆದಿದ್ದಾರೆ.

### ರಿಚಾರ್ಡ್ ಕಾಸ್ಟೇಲಿನೋ

ರಿಚಾರ್ಡ್ ಕಾಸ್ಟೇಲಿನೋ ಮಂಗಳೂರು ಮೂಲದ ಪ್ರಸಿದ್ಧ ಚಲನಚಿತ್ರ ನಿರ್ದೇಶಕರಾಗಿದ್ದು, ತುಳು, ಕೊಂಕಣಿ, ಕೊಡವ ಮತ್ತು ಕನ್ನಡ ಚಿತ್ರರಂಗಗಳಲ್ಲಿ ಸೇವೆ ಸಲ್ಲಿಸಿದ್ದಾರೆ. 1990ರ ದಶಕದಲ್ಲಿ ತುಳು ಚಿತ್ರ 'ಸೆಪ್ಟೆಂಬರ್ 8'ನ್ನು ಕೇವಲ 24 ಗಂಟೆಗಳಲ್ಲಿ ಪೂರ್ಣಗೊಳಿಸಿ, ವಿಶ್ವ ದಾಖಲೆಯನ್ನು ನಿರ್ಮಿಸಿದ್ದಾರೆ. ಅವರ ಚಿತ್ರಗಳು ಸಾಮಾಜಿಕ ಸಂದರ್ಭಗಳು, ಸಾಂಸ್ಕೃತಿಕ ಬೆಳವಣಿಗೆಗಳು ಮತ್ತು ಮಾನವೀಯ ಭಾವನೆಗಳನ್ನು ಚಿತ್ರಿಸುವಲ್ಲಿ ಪ್ರಮುಖವಾಗಿವೆ. ಇವರ ಜೀವಮಾನ ಸಾಧನೆಯನ್ನು ಪರಿಗಣಿಸಿ ರಾಜ್ಯ ಸರ್ಕಾರ ಶ್ರೀಯುತರಿಗೆ 2019ನೇ ಸಾಲಿನ 'ಡಾ.ವಿಷ್ಣು ವರ್ಧನ್ ಪ್ರಶಸ್ತಿ' ನೀಡಿ ಗೌರವಿಸುತ್ತಿದೆ.

### ಎನ್.ಆರ್. ನಂಜುಂಡೇಗೌಡ

ಎನ್.ಆರ್. ನಂಜುಂಡೇಗೌಡ ಕನ್ನಡ ಚಿತ್ರರಂಗದ ಪ್ರಮುಖ ನಿರ್ದೇಶಕರಾಗಿದ್ದು, ನಟ ಮತ್ತು ಸಂಭಾಷಣಾಕಾರರಾಗಿ ಸೇವೆ ಸಲ್ಲಿಸಿದ್ದಾರೆ. ಸಿನಿಮಾ ಸೇರಿದಂತೆ ರಂಗಭೂಮಿ ಮತ್ತು ಮಾಧ್ಯಮ ಕ್ಷೇತ್ರದಲ್ಲಿ ಅನುಭವ ಹೊಂದಿರುವ ಶ್ರೀಯುತರು ಚಲನಚಿತ್ರ ಕ್ಷೇತ್ರಕ್ಕೆ ಸಂಬಂಧಿಸಿದಂತೆ ರಾಜ್ಯ ಹಾಗೂ ರಾಷ್ಟ್ರಮಟ್ಟದ ವಿವಿಧ ಸಮಿತಿಗಳ ಸದಸ್ಯರಾಗಿ ಸೇವೆ ಸಲ್ಲಿಸಿದ್ದಾರೆ. ಶ್ರೀಯುತರು 1989ರಲ್ಲಿ 'ಸಂಕ್ರಾಂತಿ'ಯಿಂದ ಕನ್ನಡ ಚಲನಚಿತ್ರದಲ್ಲಿ ಕ್ರಾಂತಿಯನ್ನು ಆರಂಭಿಸಿದರು. ಇವರು ಚಲನಚಿತ್ರಗಳಿಗೆ ಸಂಬಂಧಿಸಿದ ಅನೇಕ ಸಂಘ-ಸಂಸ್ಥೆಗಳ ಸದಸ್ಯರಾಗಿ ಸಕ್ರಿಯ ಸೇವೆ ಸಲ್ಲಿಸುತ್ತಿದ್ದಾರೆ. ಇವರ ಜೀವಮಾನ ಸಾಧನೆಗಾಗಿ 2019ನೇ ಸಾಲಿನ 'ಪುಟ್ಟಣ ಕಣಗಾಲ್ ಪ್ರಶಸ್ತಿ'ಗೆ ಭಾಜನರಾಗಿದ್ದಾರೆ.

### ರಘುನಾಥ ಚ.ಹ

2019ರ ಅತ್ಯುತ್ತಮ ಚಲನಚಿತ್ರ ಸಾಹಿತ್ಯ ವಾರ್ಷಿಕ ಪ್ರಶಸ್ತಿಗೆ ಹಿರಿಯ ಪತ್ರಕರ್ತ ರಘುನಾಥ ಚ.ಹ ಬರೆದಿರುವ 'ಬೆಳ್ಳಿ ತೊರೆ' ಸಿನೆಮಾ ಪ್ರಬಂಧಗಳ ಕೃತಿ ಆಯ್ಕೆಯಾಗಿದೆ. ಅಂಕಿತ ಪುಸ್ತಕವು ಈ ಕೃತಿಯನ್ನು ಪ್ರಕಟಿಸಿದ್ದು, ಪ್ರಶಸ್ತಿಯು ಕೃತಿಕಾರರಿಗೆ ಹಾಗೂ ಪ್ರಕಾಶಕರಿಗೆ ತಲಾ 20 ಸಾವಿರ ರೂ ನಗದು ಮತ್ತು 50 ಗ್ರಾಂ ಬೆಳ್ಳಿ ಪದಕ ಒಳಗೊಂಡಿದೆ.

---

### ವೀರ ವನಿತೆ ಒನಕೆ ಓಬವ್ವ ಜಯಂತಿ ಪೂರ್ವಭಾವಿ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್

# ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಿ



ಸಭೆಯಲ್ಲಿ ವಿವಿಧ ಕಲಾತಂಡಗಳೊಂದಿಗೆ ಮೆರವಣಿಗೆ, ವೇದಿಕೆ ವ್ಯವಸ್ಥೆ, ಅಲ್ಪೋಪಹಾರದ ವ್ಯವಸ್ಥೆ, ಬ್ಯಾನರ್ ಅಳವಡಿಕೆ ಕುರಿತು ಚರ್ಚಿಸಲಾಯಿತು.

■ವಿಜಯಸಾಕ್ಷಿ ಸುದ್ದಿ, ಗದಗ

ವೀರವನಿತೆ ಒನಕೆ ಓಬವ್ವ ಜಯಂತಿ ಕಾರ್ಯಕ್ರಮವನ್ನು ನವೆಂಬರ್ 11ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸರ್ಕಾರದ ವತಿಯಿಂದ ಅರ್ಥಪೂರ್ಣವಾಗಿ ಹಾಗೂ ವ್ಯವಸ್ಥಿತವಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ವೀರವನಿತೆ ಒನಕೆ ಓಬವ್ವ ಜಯಂತಿ ಆಚರಣೆ ಕುರಿತು ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶಿಷ್ಟಾಚಾರದನ್ವಯ ಜಯಂತಿ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ವಹಿಸಬೇಕು. ವೀರ ವನಿತೆ ಒನಕೆ ಓಬವ್ವ ಕುರಿತು ಆಳವಾಗಿ ಅಧ್ಯಯನ ಮಾಡಿದವರನ್ನು ಉಪನ್ಯಾಸಕರನ್ನಾಗಿ ಆಯ್ಕೆ ಮಾಡಲು ಕ್ರಮ ವಹಿಸಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಜನರು ಒನಕೆ ಓಬವ್ವ ಜಯಂತಿ ಕಾರ್ಯಕ್ರಮಕ್ಕೆ ಆಗಮಿಸುವಂತೆ ನೋಡಿಕೊಳ್ಳಬೇಕು. ಎಸ್.ಎಸ್.ಎಲ್.ಸಿ, ಪಿಯುಸಿ, ಪದವಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳಿಗೆ ಜಯಂತಿ ಸಮಾರಂಭದಲ್ಲಿ ಸನ್ಮಾನ ಕಾರ್ಯಕ್ರಮ ಜರುಗಲಿದ್ದು, ಒಟ್ಟಾರೆಯಾಗಿ ವೀರ ವನಿತೆ ಓಬವ್ವ ಜಯಂತಿ ಅಚ್ಚುಕಟ್ಟಾಗಿ ನಡೆಸಬೇಕೆಂದು ಅಪರ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು. ಈ ಸಂದರ್ಭದಲ್ಲಿ ನಗರಾಬಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸವರಾಜ ಕೋಟೂರ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ. ಮಸನಾಯಕ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ, ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಮಹಬೂಬ ತುಂಬರಮಟ್ಟಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಮಾಜದ ಗಣ್ಯರು, ಹಿರಿಯರು ಹಾಜರಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸ್ವಾಗತಿಸಿ ವಂದಿಸಿದರು.

---

### ಬೆಂಬಿಡದೆ ಬರುತ್ತಿರುವ ಮಳೆರಾಯ । ಸಂಕಷ್ಟದಲ್ಲಿ ರೈತರು

# ಮೆಕ್ಕೆಜೋಳ ಬೆಳೆಗಾರರು ಕಂಗಾಲು

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಪ್ರಸ್ತುತ ವರ್ಷ ಮುಂಗಾರು ಹಾಗೂ ಹಿಂಗಾರಿನ ನಿರಂತರ ಮಳೆಗೆ ಮೆಕ್ಕೆಜೋಳ ಬೆಳೆದ ರೈತರು ಸಂಕಷ್ಟವನ್ನು ಎದುರಿಸುವಂತಾಗಿದೆ. ತೇವಾಂಶ ಹೆಚ್ಚಳದಿಂದ ಮಾರುಕಟ್ಟೆಯಲ್ಲಿ ಬೆಲೆ ಕುಸಿತ ಕಂಡಿದ್ದು, ಕೈಗೆ ಬಂದ ಅಲ್ಪಸ್ವಲ್ಪ ಫಸಲಿಗೂ ಉತ್ತಮ ದರ ಸಿಗುತ್ತಿಲ್ಲ. ಅತಿಹೆಚ್ಚಿನ ಆದಾಯದ ನಿರೀಕ್ಷೆಯಲ್ಲಿದ್ದ ಮಾರುಕಟ್ಟೆಯಲ್ಲಿ ವೈಜ್ಞಾನಿಕ ಬೆಲೆ ಸಿಗದೇ ಆತಂಕಗೊಂಡಿದ್ದಾರೆ.



ಕಳೆದ ತಿಂಗಳಷ್ಟೇ ಮೆಕ್ಕೆಜೋಳದ ಬೆಲೆ ಕ್ವಿಂಟಲ್‌ಗೆ 2400 ರೂ ಇತ್ತು. ಸದ್ಯ ಮಾರುಕಟ್ಟೆಯಲ್ಲಿ 1600 ರೂ ಇದೆ. ಕಳೆದ ವರ್ಷ ಪ್ರತಿ ಕ್ವಿಂಟಲ್‌ಗೆ 2600-2800 ರೂ ದರವಿತ್ತು. ಒಂದು ಎಕರೆ ಪ್ರದೇಶದಲ್ಲಿ ಮೆಕ್ಕೆಜೋಳ ಬೆಳೆಯಲು ಸುಮಾರು 20ರಿಂದ 30 ಸಾವಿರ ರೂ ವೆಚ್ಚವಾಗುತ್ತದೆ. ಇದರಲ್ಲಿ ಬಿತ್ತನೆ ಬೀಜ, ಗೊಬ್ಬರ, ಕೀಟನಾಶಕ, ಕೂಲಿ ಕಾರ್ಮಿಕರ ವೇತನ ಮತ್ತು ಕಾಳು ತೆಗೆಯುವ ವೆಚ್ಚ ಸೇರುತ್ತದೆ. ಆದರೆ ಪ್ರಸ್ತುತ ದರ ಕುಸಿತದಿಂದ ರೈತರು ಶ್ರಮಕ್ಕೆ ತಕ್ಕಂತೆ ಯೋಗ್ಯ ಪ್ರತಿಫಲ ಪಡೆಯದೆ ಆರ್ಥಿಕವಾಗಿ ಸಂಕಷ್ಟಕ್ಕೆ ಸಿಲುಕಿದ್ದಾರೆ.

ಪ್ರತಿ ಬಾರಿ ರೈತರ ಫಸಲು ಮಾರುಕಟ್ಟೆಗೆ ಬರುತ್ತಿದ್ದಂತೆ ಖರೀದಿದಾರರು ದಿಢೀರ್ ಬೆಲೆ ಕಡಿಮೆ ಮಾಡುತ್ತಾರೆ. ಸಾಲ-ಸೋಲ ಮಾಡಿ ಬಿತ್ತನೆ ಮಾಡಿರುವ ರೈತರು ಸಾಲ ತೀರಿಸಿದರೆ ಸಾಕು ಎಂಬ ಹತಾಶೆಯಿಂದ ಸಿಕ್ಕ ಬೆಲೆಗೆ ಮಾರಾಟ ಮಾಡುವುದು ವಾಡಿಕೆಯಾಗಿದೆ. ಸರ್ಕಾರ ತಕ್ಷಣ ಬೆಂಬಲ ಬೆಲೆ ಘೋಷಣೆ ಮಾಡಿ ಖರೀದಿ ಕೇಂದ್ರ ತೆರೆಯಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ಆಗ್ರಹಿಸಿದ್ದಾರೆ.

---

# ಕರ್ತವ್ಯ ಕೂಟದಲ್ಲಿ ಅತಿ ಹೆಚ್ಚು ಬಹುಮಾನ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಅಕ್ಟೋಬರ್ 27 ಮತ್ತು 28ರಂದು ನಡೆದ 7ನೇ ವಲಯ ಮಟ್ಟದ ಕರ್ತವ್ಯ ಕೂಟದಲ್ಲಿ ಒಟ್ಟು 10 ಬಹುಮಾನಗಳನ್ನು ಧಾರವಾಡ ಜಿಲ್ಲೆ ಪಡೆದುಕೊಂಡಿದ್ದು, ವಲಯ ಮಟ್ಟದ ಕರ್ತವ್ಯ ಕೂಟದಲ್ಲಿ ಅತಿ ಹೆಚ್ಚು ಬಹುಮಾನಗಳನ್ನು ಪಡೆದ ಘಟಕವಾಗಿದೆ.

**ಪ್ರಥಮ ಸ್ಥಾನ:** ಪಿ.ಎಸ್.ಐ ಇಮ್ರಾನ್ ಪಠಾಣ್-ಕ್ರಿಮಿನಲ್ ಕಾನೂನು ಲಿಖಿತ ಪರೀಕ್ಷೆ.

**ದ್ವಿತಿಯ ಸ್ಥಾನ:** ಇಮ್ರಾನ್ ಪಠಾಣ್-ವಿಧಿ ವಿಜ್ಞಾನ ಲಿಖಿತ ಪರೀಕ್ಷೆ, ಬೆರಳಚ್ಚು ವಿಭಾಗ, ಎಸ್. ಎನ್. ಖಾರಬಾರಿ-ಕಂಪ್ಯೂಟರ್ ಅರಿವು ವಿಭಾಗ, ವಿ.ಎಸ್. ನಾಟೇಕರ-ಛಾಯಾಗ್ರಹಣ ವಿಭಾಗ, ಎಸ್.ಹಿರೇಮಠ-ವೀಕ್ಷಣಾ ಪರೀಕ್ಷೆ, ಎಸ್. ಎಲ್. ಗೋಕಾವಿ-ವಾಹನ ಹುಡುಕಾಟ ವಿಭಾಗ, ಕೆ.ಎಮ್. ನಧಾಪ್-ಪ್ರವೇಶ ನಿಯಂತ್ರಣ ವಿಭಾಗ.

**ತೃತಿಯ ಸ್ಥಾನ:** ಎ.ಎಸ್. ತಿಗಡಿ-ಶ್ವಾನ ದಳದ ಸಮಯ ಟ್ರ್ಯಾಕರ್ ವಿಭಾಗ, ರವಿ ದತ್ತಿ-ವಾಹನ ಹುಡುಕಾಟ ವಿಭಾಗಗಳಲ್ಲಿ ಬಹುಮಾನ ಪಡೆದುಕೊಂಡಿದ್ದಾರೆ.

ಸಿಬ್ಬಂದಿಗಳ ಈ ಸಾಧನೆಗೆ ಪೊಲೀಸ್ ಅಧೀಕ್ಷಕ ಗುಂಜನ್ ಆರ್ಯ ಪ್ರಶಂಸೆಯನ್ನು ವ್ಯಕ್ತಪಡಿಸಿದ್ದಾರೆ.

---

# ಕುಷ್ಠರೋಗ ಪತ್ತೆ ಅಭಿಯಾನ ಯಶಸ್ವಿಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿ ಕುಷ್ಠರೋಗ ಪ್ರಕರಣ ಪತ್ತೆ ಹಚ್ಚುವ ಅಭಿಯಾನ-2025 ಸಮನ್ವಯ ಸಮಿತಿ ಸಭೆಯನ್ನು ಜಿಲ್ಲಾಧಿಕಾರಿಗಳ ಸಭಾಭವನದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಯೋಜಿಸಲಾಗಿತ್ತು.

ಧಾರವಾಡ ಜಿಲ್ಲೆಯಾದ್ಯಂತ ನವೆಂಬರ್ 24ರಿಂದ ಡಿಸೆಂಬರ್ 9ರವರೆಗೆ ಅಭಿಯಾನ ರೂಪದಲ್ಲಿ ಹಮ್ಮಿಕೊಳ್ಳಲು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಸಭೆಯಲ್ಲಿ ಸೂಚಿಸಿದರು.

ಕಳೆದ 5 ವರ್ಷಗಳಲ್ಲಿ ಕುಷ್ಠರೋಗ ಪ್ರಕರಣಗಳು ಕಂಡುಬಂದ ಗ್ರಾಮ, ವಾರ್ಡ್‌ಗಳನ್ನು ಆಯ್ದುಕೊಂಡು ಸಮೀಕ್ಷೆ ಮಾಡುತ್ತಿದ್ದು, ಧಾರವಾಡ ಜಿಲ್ಲೆಯ ನಗರ ಮತ್ತು ಗ್ರಾಮೀಣ ಪ್ರದೇಶಗಳನ್ನೊಳಗೊಂಡಂತೆ ಜಿಲ್ಲೆಯಾದ್ಯಂತ ಒಟ್ಟು 1,114 ತಂಡಗಳನ್ನು ರಚಿಸಿ, 13,76,418 ಜನಸಂಖ್ಯೆಯನ್ನು ಸಮೀಕ್ಷೆಗೊಳಪಡಿಸಲು ಯೋಜಿಸಲಾಗಿದೆ. ಸಮೀಕ್ಷೆಯ ಪ್ರತಿ ತಂಡದಲ್ಲಿ ಒಬ್ಬ ಮಹಿಳಾ ಸ್ವಯಂಸೇವಕರು ಹಾಗೂ ಒಬ್ಬ ಪುರುಷ ಸ್ವಯಂಸೇವಕರು ಕಾರ್ಯನಿರ್ವಹಿಸುವರು.

ಮನೆ-ಮನೆಗೆ ಭೇಟಿ ನೀಡಿ ಪ್ರತಿಯೊಬ್ಬ ನಾಗರಿಕರನ್ನು ಪರೀಕ್ಷಿಸಲು ಯೋಜಿಸಲಾಗಿದೆ. ಸಮೀಕ್ಷೆಯಲ್ಲಿ ಕುಷ್ಠರೋಗಿಗಳನ್ನು ಕಂಡುಹಿಡಿದು ಭಾರತ ಸರ್ಕಾರದ ಗುರಿಯಂತೆ ಜಿಲ್ಲೆಯನ್ನು ಕುಷ್ಠ ಮುಕ್ತವನ್ನಾಗಿಸಲು ಪಣತೊಡಲು ಎಲ್ಲ ಇಲಾಖೆಗಳೂ ಸಹಭಾಗಿತ್ವ ನೀಡಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ಆಶಾ ಕಾರ್ಯಕರ್ತರು, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ನರ್ಸಿಂಗ್ ವಿದ್ಯಾರ್ಥಿಗಳು ಈ ಅಭಿಯಾನದಲ್ಲಿ ಭಾಗವಹಿಸಿ, ಈ ಸಮೀಕ್ಷಾ ಕಾರ್ಯವನ್ನು ಯಶಸ್ವಿಗೊಳಿಸಲು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.




---

# 'ಸೌಜನ್ಯ ಪರ ಹೋರಾಟಗಾರರ ಮೇಲೆ ದೌರ್ಜನ್ಯ ಮಾಡುವಂತಿಲ್ಲ..'; ಎಸ್‌ಐಟಿಗೆ ಹೈಕೋರ್ಟ್ ಸೂಚನೆ



■ವಿಜಯಸಾಕ್ಷಿ ಸುದ್ದಿ, ಉಡುಪಿ

ತಮ್ಮ ವಿರುದ್ಧ ಎಸ್‌ಐಟಿ ದಾಖಲಿಸಿದ್ದ ಪ್ರಕರಣದ ರದ್ದು ಕೋರಿ ಸೌಜನ್ಯ ಪರ ಹೋರಾಟಗಾರರಾದ ಮಹೇಶ್ ಶೆಟ್ಟಿ ತಿಮರೋಡಿ, ಗಿರೀಶ್ ಮಟ್ಟಣ್ಣನವರ್, ಜಯಂತ್ ಟಿ, ವಿಠಲಗೌಡ ಅವರು ಹೈಕೋರ್ಟ್ ಮೊರೆ ಹೋಗಿದ್ದರು. ಅವರ ಅರ್ಜಿಯ ವಿಚಾರಣೆ ನಡೆಸಿರುವ ಹೈಕೋರ್ಟ್, ನಾಲ್ವರ ಮೇಲೆ ಎಸ್‌ಐಟಿ ದೌರ್ಜನ್ಯ ಮಾಡಬಾರದು ಎಂದು ಸೂಚಿಸಿ, ಪ್ರಕರಣಕ್ಕೆ ತಡೆಯಾಜ್ಞೆ ನೀಡಿದೆ.

ಇದೇ ಪ್ರಕರಣದಲ್ಲಿ ಅಕ್ಟೋಬರ್ 27ರಂದು ವಿಚಾರಣೆಗೆ ಹಾಜರಾಗುವಂತೆ ನಾಲ್ವರಿಗೂ ಎಸ್‌ಐಟಿ ನೋಟಿಸ್ ನೀಡಿತ್ತು. ಆದರೆ, ಅಂದೇ ಬೆಳ್ತಂಗಡಿ ತಾಲೂಕು ಕಚೇರಿ ಎದುರು ಕಪ್ಪು ಪಟ್ಟಿ ಧರಿಸಿ ಪ್ರತಿಭಟನೆ ಹಮ್ಮಿಕೊಂಡಿದ್ದರಿಂದ, ಪ್ರತಿಭಟನೆಯಲ್ಲಿ ಭಾಗಿಯಾಗುವ ಸಲುವಾಗಿ ವಿಚಾರಣೆಗೆ ಹಾಜರಾಗಿರಲಿಲ್ಲ. ಈ ಬೆನ್ನಲ್ಲೇ, ನವೆಂಬರ್ 3ರಂದು ವಿಚಾರಣೆಗೆ ಹಾಜರಾಗುವಂತೆ ಎಸ್‌ಐಟಿ ಮತ್ತೊಂದು ನೋಟಿಸ್ ಜಾರಿ ಮಾಡಿದೆ.

ಇದೆಲ್ಲದರ ನಡುವೆ, ತಿಮರೋಡಿ, ಗಿರೀಶ್, ಜಯಂತ್, ವಿಠಲಗೌಡ ಅವರ ಮೇಲೆ ದೌರ್ಜನ್ಯ ಮಾಡದಂತೆ ಹೈಕೋರ್ಟ್ ಆದೇಶಿಸಿದೆ.

ಇನ್ನು, ಇನ್ನು ಮಹೇಶ್ ಶೆಟ್ಟಿ ತಿಮರೋಡಿ ವಿರುದ್ಧ ದಾಖಲಾಗಿರುವ 'ಅಕ್ರಮವಾಗಿ ಮಾರಕಾಸ್ತ್ರ ಇಟ್ಟುಕೊಂಡಿದ್ದಾರೆ' ಎಂಬ ಪ್ರಕರಣಕ್ಕೆ ಇತ್ತೀಚೆಗೆ ಹೈಕೋರ್ಟ್ ಮಧ್ಯಂತರ ತಡೆ-ಯಾಜ್ಞೆ ನೀಡಿತ್ತು.

# ಶ್ರೀ ರಂಭಾಪುರಿ ಪೀಠದಲ್ಲಿ ಸಹಸ್ರ ದೀಪೋತ್ಸವ



■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು


ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠದಲ್ಲಿ

ಕಾರ್ತಿಕ ಸಹಸ್ರ ದೀಪೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ರಥೋತ್ಸವ ನವೆಂಬರ್ 5ರ ಸಂಜೆ ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಜರುಗುವುದು.

ಶೃಂಗೇರಿ ಕ್ಷೇತ್ರದ ಶಾಸಕ ಟಿ.ಡಿ. ರಾಜೇಗೌಡ ಕಾರ್ಯಕ್ರಮ ಉದ್ಘಾಟಿಸುವರು. ಅಂದು ಬೆಳಿಗ್ಗೆ ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ, ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿಗೆ, ಶ್ರೀ ಸೋಮೇಶ್ವರ ಮಹಾಲಿಂಗ, ಶ್ರೀ ವಿಜಯ ವಿನಾಯಕ, ಶಕ್ತಿಮಾತೆಯರಾದ ಶ್ರೀ ಪಾರ್ವತಿ, ಶ್ರೀ ಚೌಡೇಶ್ವರಿ, ಶ್ರೀ ಭದ್ರಕಾಳಿ ಹಾಗೂ ಲಿಂಗೈಕ್ಯ ಜಗದ್ಗುರುಗಳವರ ಗದ್ದುಗೆಗಳಿಗೆ ವಿಶೇಷ ಪೂಜೆ ಜರುಗುವುದು.

ದೀಪಾರಾಧನೆ ಸೇವೆಯನ್ನು ಶಿಗ್ಗಾಂವಿಯ ಲಲಿತಾದೇವಿ ಶಿವಪುತ್ರಯ್ಯ ಸುರಗೀಮಠ ಮತ್ತು ಮಕ್ಕಳು, ವಿದ್ಯುತ್ ದೀಪಾಲಂಕಾರ ಸೇವೆಯನ್ನು ಹುಬ್ಬಳ್ಳಿಯ ವೀರೇಶ ಪಾಟೀಲ ಹಾಗೂ ಬಾಳೆಹೊನ್ನೂರು, ಬಾಸಾಪುರ, ಕಡವಂತಿ, ಆಲ್ದೂರು ಸದ್ಭಕ್ತರು ನಡೆಸುವರು. ರಥೋತ್ಸವ ಮತ್ತು ದಾಸೋಹ ಸೇವೆಯನ್ನು ಚಿಕ್ಕಮಗಳೂರಿನ ಶಾಂತಮ್ಮ ಮತ್ತು ಮಕ್ಕಳು ನೆರವೇರಿಸುವರು. ಸಕಲ ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಶ್ರೀ ಪೀಠದ ಪ್ರಕಟಣೆ ತಿಳಿಸಿದೆ.

# ಶ್ರೀ ಗುರು ರೇವಣಸಿದ್ಧೇಶ್ವರ ಪುಣ್ಯಾಶ್ರಮದಲ್ಲಿ 12ನೇ ವರ್ಷದ ಕಾರ್ತಿಕ ದೀಪೋತ್ಸವ



■ವಿಜಯಸಾಕ್ಷಿ ಸುದ್ದಿ, ಶಿಕಾರಿಪುರ

ಶಿಕಾರಿಪುರ ತಾಲೂಕಿನ ತಪೋಕ್ಷೇತ್ರ ಕಡೆನಂದಿಹಳ್ಳಿ ಶ್ರೀ ಮಳೆಮಲ್ಲೇಶ್ವರಸ್ವಾಮಿ ಜಾಗೃತ ಸ್ಥಳ ಶ್ರೀ ಗುರು ರೇವಣಸಿದ್ಧೇಶ್ವರ ಪುಣ್ಯಾಶ್ರಮದಲ್ಲಿ ನವೆಂಬರ್ 5ರಂದು ಸಂಜೆ 7 ಗಂಟೆಗೆ 12ನೇ ವರ್ಷದ ಕಾರ್ತಿಕ ದೀಪೋತ್ಸವ ನಡೆಯಲಿದೆ. ಕಡೆನಂದಿಹಳ್ಳಿ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳ ಸಮ್ಮುಖದಲ್ಲಿ ನಡೆಯುವ ಸಮಾರಂಭದಲ್ಲಿ ವಿವಿಧ ಮಠಗಳ ಶಿವಾಚಾರ್ಯರು, ಗಣ್ಯರು ಭಾಗವಹಿಸುವರು. ಅಂದು ಬೆಳಿಗ್ಗೆ ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ, ಶ್ರೀ ಸೋಮೇಶ್ವರ ಮಹಾಲಿಂಗಕ್ಕೆ, ಕ್ಷೇತ್ರನಾಥ ಶ್ರೀ ಮಳೆಮಲ್ಲೇಶ್ವರ ಸ್ವಾಮಿಗೆ, ಪರಿವಾರ ದೈವಗಳಿಗೆ ವಿಶೇಷ ರುದ್ರಾಭಿಷೇಕ, ಶಿವಾಷ್ಟೋತ್ತರ, ಮಹಾಮಂಗಳಾರತಿ ಪೂಜಾ ಕಾರ್ಯಕ್ರಮಗಳು ಜರುಗುತ್ತವೆ.

ಸಂಜೆ 5 ಗಂಟೆಗೆ 2026ರ ಜನವರಿ 19-20ರಂದು ನಡೆಯಲಿರುವ ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಪರಂಪರೆ ಜಾತ್ರೋತ್ಸವ ಮತ್ತು ಶ್ರೀ ರಂಭಾಪುರಿ ಜಗದ್ಗುರು ರೇವಣಸಿದ್ಧೇಶ್ವರ ರಾಷ್ಟ್ರೀಯ ಪ್ರಶಸ್ತಿ ಪ್ರದಾನ, ಧಾರ್ಮಿಕ ಸಾಂಸ್ಕೃತಿಕ ಸಮಾರಂಭದ ಪೂರ್ವಭಾವಿ ಸಭೆ ನಡೆಯಲಿದೆ. ಸಮಸ್ತ ಸದ್ಭಕ್ತರು ಈ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಶ್ರೀ ಮಠದ ಪ್ರಕಟಣೆ ತಿಳಿಸಿದೆ.

## ಕನ್ನಡ ನಾಡ ಹಬ್ಬದ ಮೆರುಗು-ರಾಜ್ಯೋತ್ಸವದ ಸಂಭ್ರಮದಲ್ಲಿ ಕರ್ನಾಟಕ

# ಕನ್ನಡ ಭಾಷೆ ನಾಡಿನ ಹೃದಯದ ಧ್ವನಿ

ನವೆಂಬರ್ 1, ಕನ್ನಡಿಗರ ಹೃದಯದಲ್ಲಿ ಹೆಮ್ಮೆಯ ದಿನ. ಈ ದಿನ ಕನ್ನಡ ನಾಡಿನ ಆತ್ಮವು ಹೊಸ ಜೀವವನ್ನು ಪಡೆದುಕೊಳ್ಳುತ್ತದೆ. 1956ರ ನವೆಂಬರ್ 1ರಂದು, ಕನ್ನಡ ಮಾತನಾಡುವ ಎಲ್ಲಾ ಪ್ರದೇಶಗಳನ್ನು ಒಂದೇ ರಾಜ್ಯವಾಗಿ ಏಕೀಕರಿಸಲಾಯಿತು. ಹೀಗೆ ಹುಟ್ಟಿತು ನಮ್ಮ ಪ್ರಿಯ ನಾಡು-ಕರ್ನಾಟಕ! ಸಾಹಿತ್ಯ, ಕಲೆ, ಸಂಸ್ಕೃತಿ, ವಿಜ್ಞಾನ, ಕೃಷಿ ಹಾಗೂ ತಂತ್ರಜ್ಞಾನದಲ್ಲಿ ದೇಶದ ಮುಂಚೂಣಿಯ ರಾಜ್ಯವಾದ ಕರ್ನಾಟಕ, ನುಡಿಯ ಏಕತೆಯ ಮತ್ತು ಸಂಸ್ಕೃತಿಯ ಶ್ರೀಮಂತಿಕೆಯ ಪ್ರತೀಕವಾಗಿದೆ.



ಕನ್ನಡ ರಾಜ್ಯೋತ್ಸವ ಕೇವಲ ಹಬ್ಬವಲ್ಲ, ಅದು ಕನ್ನಡಿಗರ ಅಸ್ತಿತ್ವದ ಗುರುತು. ಈ ದಿನ ರಾಜ್ಯದಾದ್ಯಂತ ಕೆಂಪು-ಹಳದಿ ಧ್ವಜಗಳು ಹಾರಾಡುತ್ತವೆ, ಕನ್ನಡ ಗೀತೆಗಳು ಮೊಳಗುತ್ತವೆ. 'ಜೈ ಕರ್ನಾಟಕ ಮಾತೆ' ಎಂಬ ಘೋಷಣೆ ಎಲ್ಲೆಡೆ ಪ್ರತಿಧ್ವನಿಸುತ್ತದೆ. ಪ್ರತಿಯೊಂದು ಜಿಲ್ಲೆಗಳಲ್ಲಿ ಧ್ವಜಾರೋಹಣ, ರಾಜ್ಯೋತ್ಸವ ಪ್ರಶಸ್ತಿ ವಿತರಣೆ, ಕಲಾ ಪ್ರದರ್ಶನ, ಕಾವ್ಯ ವಾಚನ ಹಾಗೂ ಜನಪದ ನೃತ್ಯಗಳ ಸೊಬಗು ರಾಜ್ಯದ ವೈವಿಧ್ಯತೆಯ ಸೌಂದರ್ಯವನ್ನು ತೋರಿಸುತ್ತದೆ.

ಕನ್ನಡ ಭಾಷೆ ಕೇವಲ ಮಾತಿನ ಮಾಧ್ಯಮವಲ್ಲ. ಅದು ನಾಡಿನ ಹೃದಯದ ಧ್ವನಿ. ಪಂಪ, ರನ್ನ, ಕುಮಾರವ್ಯಾಸ, ದ.ರಾ. ಬೇಂದ್ರೆ, ಕುವೆಂಪು, ಗೋಪಾಲಕೃಷ್ಣ ಅಡಿಗ, ಚನ್ನವೀರ ಕಣವಿ ಮುಂತಾದ ಮಹನೀಯರು ಕನ್ನಡ ಸಾಹಿತ್ಯದ ಆಕಾಶದಲ್ಲಿ ಶಾಶ್ವತ ನಕ್ಷತ್ರಗಳಾಗಿ ಕಂಗೊಳಿಸುತ್ತಿದ್ದಾರೆ. 'ನಮ್ಮ ನುಡಿ, ನಮ್ಮ ನಾಡು' ಎಂಬ ಘೋಷಣೆ ಪ್ರತಿಯೊಬ್ಬ ಕನ್ನಡಿಗನ ಜೀವದ ಘೋಷಣೆಯಾಗಿದೆ.

ಬೆಂಗಳೂರು, ಮೈಸೂರು, ಹಂಪಿ, ಧಾರವಾಡ, ಬಿಜಾಪುರ, ಗದಗ ಇವುಗಳೆಲ್ಲಾ ಕನ್ನಡ ನಾಡಿನ ಜೀವಂತ ಚಿಹ್ನೆಗಳು. ಹಂಪಿಯ ಶಿಲ್ಪಗಳಲ್ಲಿ ಬರೆದ ಕಥೆಗಳು, ಮೈಸೂರಿನ ರಾಜಮನೆತನದ ಕಲಾ ವೈಭವ, ಧಾರವಾಡದ ಸಾಹಿತ್ಯ ಪರಂಪರೆ, ಗದಗಿನ ಸಂಗೀತ, ಸಾಹಿತ್ಯ ಹಾಗೂ ಬೆಂಗಳೂರಿನ ತಂತ್ರಜ್ಞಾನ ಇವೆಲ್ಲ ಕನ್ನಡ ನಾಡಿನ ನವೀನತೆ ಮತ್ತು ಪರಂಪರೆಯ ಸಮತೋಲನದ ಸಾಕ್ಷ್ಯಗಳು.

ಕರ್ನಾಟಕ ಎಂಬ ಹೆಸರಿನ ಗೌರವಯುತ ಹುಟ್ಟಿಗೆ ಗದಗ ನಾಡು ನೀಡಿದ ಕೊಡುಗೆ ಅಜರಾಮರ. 1956ರಲ್ಲಿ ರಾಜ್ಯ ನಿರ್ಮಾಣವಾದಾಗ ಅದನ್ನು 'ಮೈಸೂರು ರಾಜ್ಯ' ಎಂದು ಕರೆಯಲಾಯಿತು. ಆದರೆ ಆ ಹೆಸರು ಸಮಗ್ರ ಕನ್ನಡ ನಾಡಿನ ಆತ್ಮವನ್ನು ಪ್ರತಿನಿಧಿಸಲಿಲ್ಲ. ಹೀಗಾಗಿ ನಾಡು ತುಂಬ 'ಮೈಸೂರು ಅಲ್ಲ - ಕರ್ನಾಟಕ ಬೇಕು!' ಎಂಬ ಘೋಷಣೆ ಮೊಳಗಿತು.

ಈ ಹೋರಾಟಕ್ಕೆ ಜೀವ ತುಂಬಿದ ನಾಡುಗಳಲ್ಲಿ ಗದಗ ಪ್ರಮುಖ. ಇಲ್ಲಿ ಸಾಹಿತ್ಯಪರರು, ವಿದ್ಯಾರ್ಥಿಗಳು, ಯುವಕರು ಮತ್ತು ನಾಯಕರಿಂದ ಕನ್ನಡ ನುಡಿಯ ಗೌರವಕ್ಕಾಗಿ ಅಸಾಧಾರಣ ಚಳುವಳಿ ನಡೆಯಿತು. ಅಲೂರ ವೇಂಕಟರಾವ್ ಅವರ ಕನಸು 'ಕನ್ನಡನಾಡು ಒಂದಾಗಬೇಕು, ಅದರ ಹೆಸರು ಕರ್ನಾಟಕವಾಗಬೇಕು' ಗದುಗಿನ ವೇದಿಕೆಗಳಲ್ಲಿ ಘೋಷಣೆಯಾಗಿ ಮೊಳಗಿತು. ಕವಿ ಗುರುರಾಜ ಭಟ್ಟ, ಪಂಡಿತ ನರಸಿಂಹಾಚಾರ್ಯರು ಮತ್ತು ಶರಣ ಪರಂಪರೆಯ ಚಿಂತಕರು ಈ ಹೋರಾಟಕ್ಕೆ ವೈಚಾರಿಕ ಶಕ್ತಿ ನೀಡಿದರು.

ಗದಗ, ಧಾರವಾಡ, ಹುಬ್ಬಳ್ಳಿ, ಬಳ್ಳಾರಿ ಭಾಗಗಳಲ್ಲಿ ನಡೆದ ಜನಸಮಾವೇಶಗಳು ರಾಜ್ಯ ಸರ್ಕಾರದ ಗಮನ ಸೆಳೆಯುವಲ್ಲಿ ಮಹತ್ವದ ಪಾತ್ರವಹಿಸಿದವು. ಈ ಧ್ವನಿ ಬಲಿಷ್ಠ ಚಳುವಳಿಯಾಗಿ ಬೆಳೆಯಿತು. ಅಂತೂ 1973ರ ನವೆಂಬರ್ 1ರಂದು 'ಮೈಸೂರು ರಾಜ್ಯ' ಎಂಬ ಹೆಸರನ್ನು ಅಧಿಕೃತವಾಗಿ 'ಕರ್ನಾಟಕ ರಾಜ್ಯ' ಎಂದು ಬದಲಾಯಿಸಲಾಯಿತು. ಆ ದಿನ ಕನ್ನಡ ನಾಡಿನ ಹೋರಾಟಗಾರರ ಕಣ್ಣೀರು ಹೆಮ್ಮೆಯ ಕಿರಣವಾಗಿ ಪರಿವರ್ತಿತವಾಯಿತು.

ಇಂದಿನ ಗದಗ, ಕರ್ನಾಟಕದ ನಾಮಕರಣ ಚಳುವಳಿಯ ಇತಿಹಾಸವನ್ನು ಹೆಮ್ಮೆಯಿಂದ ನೆನೆಸಿಕೊಳ್ಳುತ್ತದೆ. ಬಸವೇಶ್ವರರ ಶರಣ ತತ್ವ, ವಾಚನ ಸಾಹಿತ್ಯದ ಪರಂಪರೆ, ವೀರನಾರಾಯಣ ದೇವಾಲಯ, ಸೂಡಿ ಲಕ್ಕುಂಡಿಯ ವಾಸ್ತುಶಿಲ್ಪ, ಸಾಂಸ್ಕೃತಿಕ ಸೌಂದರ್ಯ ಇವೆಲ್ಲವೂ ನುಡಿಯ ನೆಲೆಗಟ್ಟಾಗಿವೆ. ಗದುಗಿನ ನಾದ, ನುಡಿ ಮತ್ತು ನಿಷ್ಠೆ ಕರ್ನಾಟಕದ ನಾಮದಲ್ಲಿ ಅಚ್ಚಳಿಯದ ಗುರುತು ಬರೆದಿವೆ.

ರಾಜ್ಯೋತ್ಸವದ ದಿನ ನಾವು ಕೇವಲ ಹಬ್ಬವನ್ನು ಆಚರಿಸುವುದಕ್ಕಿಂತ ಕನ್ನಡದ ಸಂರಕ್ಷಣೆಯ ಪ್ರತಿಜ್ಞೆ ಮಾಡೋಣ. ಕನ್ನಡ ಮಾಧ್ಯಮ ಶಿಕ್ಷಣವನ್ನು ಉತ್ತೇಜಿಸುವುದು, ಸ್ಥಳೀಯ ಯುವಕರಿಗೆ ಉದ್ಯೋಗ ಸೌಲಭ್ಯ ಕಲ್ಪಿಸುವುದು, ಮತ್ತು ನಾಡಿನ ಸಾಂಸ್ಕೃತಿಕ ಪರಂಪರೆಯನ್ನು ಮುಂದಿನ ಪೀಳಿಗೆಗೆ ಸಾರುವುದು ಪ್ರತಿಯೊಬ್ಬ ಕನ್ನಡಿಗನ ಜವಾಬ್ದಾರಿ.

ಕರ್ನಾಟಕ ರಾಜ್ಯೋತ್ಸವವು ನಾಡಿನ ಗೌರವ, ನುಡಿಯ ಶಕ್ತಿ ಮತ್ತು ಸಂಸ್ಕೃತಿಯ ವೈಭವವನ್ನು ಪ್ರತಿಬಿಂಬಿಸುವ ದಿನ. ಇದು ಗದುಗಿನ ಹೋರಾಟದಿಂದ ಹುಟ್ಟಿದ ನಾಡಿನ ಕಥೆ, ಕನ್ನಡಿಗರ ಒಗ್ಗಟ್ಟಿನ ಪ್ರತೀಕ. ನಮ್ಮ ನುಡಿ, ನಾಡು ಮತ್ತು ಸಂಸ್ಕೃತಿಯನ್ನು ಕಾಪಾಡಿ ಬೆಳೆಸುವುದು ನಮ್ಮ ಧರ್ಮ. ಕನ್ನಡದ ಬೆಳಕು ಯಾವತ್ತೂ ನಂದದಿರಲಿ-ಎಲ್ಲಿ ಕನ್ನಡ, ಅಲ್ಲಿ ಜೀವ!

ಕನ್ನಡದ ಬಗ್ಗೆ ಹೆಮ್ಮೆ ಇರಲಿ. ಕನ್ನಡದಲ್ಲಿ ಮಾತನಾಡಿ, ಕನ್ನಡದಲ್ಲಿ ಕನಸು ಕಾಣಿ, ಕನ್ನಡದಲ್ಲಿ ಸಾಧನೆ ಮಾಡಿ. ಇಂಗ್ಲಿಷ್ ಕಲಿಯುವುದು ಅಗತ್ಯ. ಆದರೆ, ಕನ್ನಡವನ್ನು ಮರೆಯುವುದು ಅಪರಾಧ. ನಮ್ಮ ಭಾಷೆ-ನಮ್ಮ ಗುರುತು. ಅದು ನಶಿಸದಂತೆ ನೋಡಿಕೊಳ್ಳೋಣ. ಮಕ್ಕಳ ಶಿಕ್ಷಣದಲ್ಲಿ ಕನ್ನಡದ ಪ್ರಾಮುಖ್ಯತೆ ಇರಬೇಕು. ಮಾಧ್ಯಮ, ವ್ಯವಹಾರ, ಆಡಳಿತ ಎಲ್ಲೆಡೆ ಕನ್ನಡಕ್ಕೆ ಆದ್ಯತೆ ಕೊಡಬೇಕು. ಈ ಹಬ್ಬ ನಮ್ಮೆಲ್ಲರಿಗೂ ಕನ್ನಡಕ್ಕಾಗಿ ನಿಜವಾದ ಬದ್ಧತೆಯ ಪ್ರಮಾಣವಾಗಿರಲಿ.

**- ವಸಂತ ಬಿ.ಮಡ್ಲೂರ.**
ಸಹಾಯಕ ನಿರ್ದೇಶಕರು,
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ-ಗದಗ.


# ಪವರ್ ಬಿಲ್ ಬಾಕಿ: ಉತ್ತರ ಕನ್ನಡದ 5 ಸರ್ಕಾರಿ ಕಚೇರಿಗಳ ವಿದ್ಯುತ್ ಕಟ್, ಕತ್ತಲಲ್ಲೇ ಕುಳಿತ ಸಿಬ್ಬಂದಿ

■ವಿಜಯಸಾಕ್ಷಿ ಸುದ್ದಿ, ಕಾರವಾರ

ವಿದ್ಯುತ್ ಬಿಲ್ ಬಾಕಿ ಉಳಿಸಿಕೊಂಡ ಹಿನ್ನೆಲೆಯಲ್ಲಿ ಉತ್ತರ ಕನ್ನಡ ಜಿಲ್ಲೆಯ ಐದು ಸರ್ಕಾರಿ ಕಚೇರಿಗಳಿಗೆ ವಿದ್ಯುತ್ ಪೂರೈಕೆ ಸಂಸ್ಥೆ ಪವರ್ ಕಟ್ ಮಾಡಿದೆ.

ಕಳೆದ ಏಳು ತಿಂಗಳಿನಿಂದ ಈ ಕಚೇರಿಗಳ ವಿದ್ಯುತ್ ಬಿಲ್ ಲಕ್ಷಾಂತರ ರೂಪಾಯಿಗೆ ತಲುಪಿದ್ದರೂ, ಪಾವತಿ ಮಾಡದ ಕಾರಣದಿಂದ ಇಲಾಖೆ ಕಟ್ಟುನಿಟ್ಟಿನ ಕ್ರಮ ಕೈಗೊಂಡಿದೆ. ಕಾರವಾರ, ಭಟ್ಕಳ, ಸಿರ್ಸಿ, ಯಲ್ಲಾಪುರ ಮತ್ತು ಹೊನ್ನಾವರ ತಾಲೂಕುಗಳ ಸರ್ಕಾರಿ ಕಚೇರಿಗಳು ಈ ಕ್ರಮಕ್ಕೆ ಒಳಪಟ್ಟಿವೆ. ಹಲವಾರು ಬಾರಿ ನೋಟಿಸ್ ನೀಡಿದರೂ ಬಿಲ್ ಪಾವತಿ ಆಗದ ಹಿನ್ನೆಲೆಯಲ್ಲಿ, ಇಲಾಖೆ ಅಂತಿಮವಾಗಿ ವಿದ್ಯುತ್ ಸಂಪರ್ಕ ಕಡಿತಗೊಳಿಸಿದೆ.

# ಸುಡಾನ್‌ನ ಅಲ್-ಫಾಶೆರ್‌ನಲ್ಲಿ ಭೀಕರ ನರಮೇಧ : ಮೂರು ದಿನಗಳಲ್ಲಿ 1,500 ಜನರನ್ನು ಹತ್ಯೆಗೈದ ಆರ್‌ಎಸ್‌ಎಫ್




■ವಿಜಯಸಾಕ್ಷಿ ಸುದ್ದಿ, ಸುಡಾನ್

ಸುಡಾನ್‌ನ ಉತ್ತರ ದಾರ್ಫರ್ ರಾಜ್ಯದ ರಾಜಧಾನಿ ಅಲ್- ಫಾಶೆರ್ ಅನ್ನು ವಶಪಡಿಸಿಕೊಂಡ ಬಳಿಕ, ಕಳೆದ ಮೂರು ದಿನಗಳಲ್ಲಿ ಅರೆ ಸೈನಿಕ ಪಡೆ ರ್‍ಯಾಪಿಡ್ ಸಪೋರ್ಟ್ ಫೋರ್ಸಸ್ (ಆರ್‌ಎಸ್‌ಎಫ್) ಕನಿಷ್ಠ 1,500 ಜನರನ್ನು ಹತ್ಯೆ ಮಾಡಿದೆ ಎಂದು ವರದಿಯಾಗಿದೆ.

ರಾಜಧಾನಿ ಅಲ್-ಪಾಶೆರ್ ಅನ್ನು ಸಂಪೂರ್ಣ ವಶಕ್ಕೆ ಪಡೆದಿರುವ ಆರ್‌ಎಸ್‌ಎಫ್, ಇಡೀ ದಾರ್ಫರ್ ರಾಜ್ಯವನ್ನು ತನ್ನ ನಿಯಂತ್ರಣಕ್ಕೆ ತೆಗೆದುಕೊಂಡಿದೆ. 2023ರಿಂದ ಸಂಪೂರ್ಣ ಸುಡಾನ್ ಅನ್ನು ನಿಯಂತ್ರಣಕ್ಕೆ ಪಡೆಯಲು ಆರ್‌ಎಸ್‌ಎಫ್ ಸುಡಾನ್ ಸೇನೆಯೊಂದಿಗೆ ಸಂಘರ್ಷದಲ್ಲಿ ತೊಡಗಿದೆ.

ಆರ್‌ಎಸ್‌ಎಫ್ ಕೈಯಿಂದ ಜೀವ ಕಾಪಾಡಿಕೊಳ್ಳಲು ಜನರು ಪಲಾಯನ ಮಾಡುತ್ತಿದ್ದಾರೆ. ಈ ವೇಳೆ ಅವರನ್ನು ಹಿಡಿದು ನಿರ್ದಯವಾಗಿ ಹತ್ಯೆ ಮಾಡಲಾಗುತ್ತಿದೆ. ಮನೆಗಳಿಗೆ ನುಗ್ಗಿ ಜನರನ್ನು ಕೊಲ್ಲಲಾಗುತ್ತಿದೆ. ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗುತ್ತಿದ್ದಾರೆ. ಇದು 'ನಿಜವಾದ ನರಮೇಧ' ಎಂದು ದೇಶದ ಅಂತರ್ಯುದ್ಧವನ್ನು ವರದಿ ಮಾಡುವ ಗುಂಪು ಸುಡಾನ್ ಡಾಕ್ಟರ್ಸ್ ನೆಟ್‌ವರ್ಕ್ ಹೇಳಿರುವುದಾಗಿ ಸುದ್ದಿ ಸಂಸ್ಥೆ ಅಲ್-ಜಝೀರಾ ವರದಿ ಮಾಡಿದೆ.

"ಇಂದು ಜಗತ್ತು ನೋಡುತ್ತಿರುವ ಹತ್ಯಾಕಾಂಡಗಳು ಒಂದೂವರೆ ವರ್ಷದ ಹಿಂದೆ ಅಲ್-ಫಾಶೆರ್‌ನಲ್ಲಿ ನಡೆದ ಹತ್ಯಾಕಾಂಡದ ಮುಂದುವರಿದ ಭಾಗವಾಗಿದೆ. ಆ ಸಮಯದಲ್ಲಿ ಬಾಂಬ್ ದಾಳಿ, ಹಸಿವು ಮತ್ತು ಕಾನೂನುಬಾಹಿರ ಮರಣದಂಡನೆಗಳ ಮೂಲಕ 14,000ಕ್ಕೂ ಹೆಚ್ಚು ನಾಗರಿಕರು ಕೊಲ್ಲಲ್ಪಟ್ಟಿದ್ದರು" ಎಂದು ಡಾಕ್ಟರ್ಸ್ ನೆಟ್‌ವರ್ಕ್ ತಿಳಿಸಿದೆ.

ಅಕ್ಟೋಬರ್ 26ರಂದು ಆರ್‌ಎಸ್‌ಎಫ್ ಅಲ್-ಫಾಶೆರ್ ಅನ್ನು ವಶಪಡಿಸಿಕೊಂಡ ಬಳಿಕ, ಯೇಲ್ ವಿಶ್ವವಿದ್ಯಾನಿಲಯದ ಹ್ಯೂಮನಿಟೇರಿಯನ್ ರಿಸರ್ಚ್ ಲ್ಯಾಬ್, ತಾನು ತೆಗೆದ ಉಪಗ್ರಹ ಚಿತ್ರಗಳನ್ನು ಬಿಡುಗಡೆ ಮಾಡಿತ್ತು. ಅದರಲ್ಲಿ ಶವಗಳ ರಾಶಿ, ದೊಡ್ಡ ಮಟ್ಟದ ರಕ್ತದ ಕಲೆಗಳು ಗೋಚರವಾಗಿವೆ. ಇವುಗಳು ಭೀಕರ ನರಮೇಧವನ್ನು ಸೂಚಿಸುತ್ತದೆ ಎಂದು ವರದಿಗಳು ಹೇಳಿತ್ತು.

ವಿಶ್ವಸಂಸ್ಥೆ ಸೇರಿದಂತೆ ಜಾಗತಿಕ ಒಕ್ಕೂಟಗಳು ಹಿಂಸಾಚಾರವನ್ನು ಖಂಡಿಸಿತ್ತು. ಶಾಂತಿಗೆ ಕರೆ ಕೊಟ್ಟಿತ್ತು. ಈ ಬೆನ್ನಲ್ಲೇ ಸುಡಾನ್ ಡಾಕ್ಟರ್ಸ್ ನೆಟ್‌ವರ್ಕ್ ನೀಡಿರುವ ಭೀಕರದ ನರಮೇಧದ ವರದಿ ಜಗತ್ತನ್ನು ಬೆಚ್ಚಿ ಬೀಳಿಸಿದೆ.

# ಪಟಾಕಿ ಸಿಡಿಸುವುದು ಧಾರ್ಮಿಕ ಹಕ್ಕಿನಡಿ ರಕ್ಷಿಸಲ್ಪಟ್ಟಿಲ್ಲ : ನಿವೃತ್ತ ನ್ಯಾಯಮೂರ್ತಿ ಅಭಯ್ ಎಸ್. ಓಕಾ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಮಾಲಿನ್ಯ ಅಥವಾ ಪರಿಸರ ಹಾನಿ ಉಂಟುಮಾಡುವ ಧಾರ್ಮಿಕ ಆಚರಣೆಗಳು ಸಂವಿಧಾನದ 25ನೇ ವಿಧಿಯಡಿ (ಧಾರ್ಮಿಕ ಸ್ವಾತಂತ್ರ್ಯದ ಹಕ್ಕು) ರಕ್ಷಣೆ ಪಡೆಯಲು ಸಾಧ್ಯವಿಲ್ಲ ಎಂದು ಸುಪ್ರೀಂ ಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಅಭಯ್ ಎಸ್. ಓಕಾ ಹೇಳಿದ್ದಾರೆ. ನಾಗರಿಕರು, ಸರ್ಕಾರಗಳು ಮತ್ತು ನ್ಯಾಯಾಲಯಗಳು ಹಬ್ಬಗಳು ಮತ್ತು ನಂಬಿಕೆ ಆಧಾರಿತ ಪದ್ಧತಿಗಳು ಪರಿಸರ ಮೇಲೆ ಬೀರುವ ಪರಿಣಾಮದ ಕುರಿತು ಪುನ:ವಿಮರ್ಶಿಸುವಂತೆ ಒತ್ತಾಯಿಸಿದ್ದಾರೆ.

"ಪಟಾಕಿ ಸಿಡಿಸುವುದು ಅಥವಾ ನದಿಗಳನ್ನು ಮಾಲಿನ್ಯ ಮಾಡುವ ಈ ರೀತಿಯ ಚಟುವಟಿಕೆಗಳು ಸಂವಿಧಾನದ 25ನೇ ವಿಧಿಯಡಿ ರಕ್ಷಣೆ ರಕ್ಷಿಸಲ್ಪಟ್ಟಿವೆಯೇ? ಎಂಬುವುದು ಪ್ರಶ್ನೆ. ನನ್ನ ಸೀಮಿತ ಜ್ಞಾನದ ಪ್ರಕಾರ, ಉತ್ತರವು ದೃಢವಾಗಿ ನಕಾರಾತ್ಮಕವಾಗಿರಬೇಕು" ಎಂದು ಸುಪ್ರೀಂ ಕೋರ್ಟ್ ಬಾರ್ ಅಸೋಸಿಯೇಷನ್ ಆಯೋಜಿಸಿದ್ದ 'ಕ್ಲೀನ್ ಏರ್, ಕ್ಲೈಮೆಟ್ ಜಸ್ಟಿಸ್ ಅಂಡ್ ವಿ - ಟುಗೆದರ್ ಫಾರ್ ಎ ಸಸ್ಟೇನೇಬಲ್ ಫ್ಯೂಚರ್' ಎಂಬ ಉಪನ್ಯಾಸದಲ್ಲಿ ಓಕಾ ಹೇಳಿದ್ದಾರೆ.

ಧಾರ್ಮಿಕ ಸ್ವಾತಂತ್ರ್ಯವಾಗಲಿ ಅಥವಾ ಜನಪ್ರಿಯ ಭಾವನೆಯಾಗಲಿ ಸಾರ್ವಜನಿಕ ಆರೋಗ್ಯ ಅಥವಾ ಪರಿಸರ ಸುರಕ್ಷತೆಗೆ ಅಪಾಯವನ್ನುಂಟುಮಾಡುವ ಕ್ರಮಗಳನ್ನು ಸಮರ್ಥಿಸಲು ಸಾಧ್ಯವಿಲ್ಲ ಎಂದಿದ್ದಾರೆ.

"ಧಾರ್ಮಿಕ ಹಬ್ಬದಂದು ಮಾಲಿನ್ಯ ಸೃಷ್ಟಿಸುವ ಹಕ್ಕು ನನಗಿದೆ ಎಂದು ನಾನು ಹೇಳಲಾರೆ. ಸಂವಿಧಾನವನ್ನು ಪಾಲಿಸುವುದು ಮತ್ತು 21ನೇ ವಿಧಿಯ ಅಡಿಯಲ್ಲಿ ಪ್ರತಿಯೊಬ್ಬರೂ ತಮ್ಮ ಹಕ್ಕನ್ನು ಅನುಭವಿಸುವಂತೆ ನೋಡಿಕೊಳ್ಳುವುದು ನನ್ನ ಮೂಲಭೂತ ಕರ್ತವ್ಯ.



ನ್ಯಾಯಾಲಯಗಳು ಪರಿಸರ ವಿಷಯಗಳನ್ನು ನಿರ್ವಹಿಸುವಾಗ, ಅವು ಜನಪ್ರಿಯ ಅಥವಾ ಧಾರ್ಮಿಕ ಭಾವನೆಗಳಿಂದ ಪ್ರಭಾವಿತವಾಗಬಾರದು" ಎಂದು ಅಭಯ್ ಎಸ್. ಓಕಾ ಹೇಳಿದ್ದಾರೆ.

ಪರಿಸರ (ರಕ್ಷಣೆ) ಕಾಯ್ದೆ, ವಾಯು (ಮಾಲಿನ್ಯ ತಡೆಗಟ್ಟುವಿಕೆ ಮತ್ತು ನಿಯಂತ್ರಣ) ಕಾಯ್ದೆ ಮತ್ತು ಜಲ (ಮಾಲಿನ್ಯ ತಡೆಗಟ್ಟುವಿಕೆ ಮತ್ತು ನಿಯಂತ್ರಣ) ಕಾಯ್ದೆಗಳಿಗೆ ಇತ್ತೀಚೆಗೆ ಮಾಡಲಾದ ತಿದ್ದುಪಡಿಗಳ ಬಗ್ಗೆ ನ್ಯಾಯಮೂರ್ತಿ ಓಕಾ ಕಳವಳ ವ್ಯಕ್ತಪಡಿಸಿದ್ದು, ಇವು ಉಲ್ಲಂಘನೆಗಳಿಗೆ ಕ್ರಿಮಿನಲ್ ಹೊಣೆಗಾರಿಕೆಯನ್ನು ತೆಗೆದುಹಾಕಿವೆ ಎಂದಿದ್ದಾರೆ.

"ಮೊದಲು ಪರಿಸರ ಕಾಯ್ದೆಗಳಲ್ಲಿ (ಇಪಿಎ, ಗಾಳಿ ಮತ್ತು ನೀರು ಕಾಯ್ದೆಗಳು) ಮಾಲಿನ್ಯಕಾರಕ ಕೃತ್ಯಗಳಿಗೆ ಜೈಲು ಶಿಕ್ಷೆ ಅಥವಾ ಅಪರಾಧ ಕೇಸ್ ಹಾಕುವ ನಿಯಮಗಳಿದ್ದವು. ಆದರೆ ಈಗ ಶಾಸಕಾಂಗವು ಆ ನಿಯಮಗಳನ್ನು ತೆಗೆದುಹಾಕಿ, ಕೇವಲ ಹಣದ ದಂಡ ಮಾತ್ರ ವಿಧಿಸುವಂತೆ ಬದಲಾಯಿಸಿದೆ. ಉದಾಹರಣೆಗೆ, ಕುಡಿಯುವ ನೀರನ್ನು ಕಲುಷಿತಗೊಳಿಸಿದರೂ ಆ ವ್ಯಕ್ತಿಗೆ ಜೈಲು ಶಿಕ್ಷೆಯಾಗದು, ಕೇವಲ ದಂಡ ಮಾತ್ರ. ಇದು ಪರಿಸರ ರಕ್ಷಣೆಯನ್ನು ದುರ್ಬಲಗೊಳಿಸುತ್ತದೆ ಎಂಬುದು ಓಕಾ ಕಳವಳ ವ್ಯಕ್ತಪಡಿಸಿದ್ದಾರೆ.

ಪರಿಸರ ಸಂರಕ್ಷಣೆ ಯಾವಾಗಲೂ ಭಾರತೀಯ ಸಂಸ್ಕೃತಿಯ ಭಾಗವಾಗಿದೆ ಎಂದು ನಿವೃತ್ತ ನ್ಯಾಯಾಧೀಶರು ಹೇಳಿದ್ದಾರೆ.

"ಶತಮಾನಗಳಿಂದ ನಮ್ಮ ಧಾರ್ಮಿಕ ಮತ್ತು ತತ್ವಜ್ಞಾನಿಗಳು ನಮ್ಮ ಪರಿಸರವನ್ನು ಸಂರಕ್ಷಿಸುವ ಮಹತ್ವವನ್ನು ನಮಗೆ ಕಲಿಸಿದ್ದಾರೆ. ನಾವು ಈ ಅಂತಾರಾಷ್ಟ್ರೀಯ ಸಮಾವೇಶಗಳಿಗೆ ಹೋಗಬೇಕಾಗಿಲ್ಲ; ಅದು ನಮ್ಮ ಸಂಸ್ಕೃತಿಯ ಒಂದು ಭಾಗವಾಗಿದೆ. ಬಹುಶಃ ಕಾಲಾನಂತರದಲ್ಲಿ, ನಮ್ಮ ಸಂಸ್ಕೃತಿಯಲ್ಲಿ ಯಾವುದು ಉತ್ತಮ ಎಂಬುದನ್ನು ನಾವು ಮರೆತಿರಬಹುದು" ಎಂದಿದ್ದಾರೆ.

"ಹಸಿರು ಬೆಂಚುಗಳ" ಪರಿಣಾಮಕಾರಿತ್ವವನ್ನು ಅವುಗಳ ಶೀರ್ಷಿಕೆಯಿಂದಲ್ಲ, ಬದಲಾಗಿ ಅವುಗಳ ಕೆಲಸದ ಮೂಲಕ ನಿರ್ಣಯಿಸಬೇಕು ಎಂದು ಓಕಾ ಹೇಳಿದ್ದಾರೆ.

# 'ಥರ್ಡ್ ಕ್ಲಾಸ್ ವಂಚಕನಿಂದ ಇನ್ನೇನು ನಿರೀಕ್ಷಿಸಲು ಸಾಧ್ಯ': ಅಸ್ಸಾಂ ಸಿಎಂಗೆ ಪ್ರಿಯಾಂಕ್ ಖರ್ಗೆ ತಿರುಗೇಟು

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ಐಟಿ/ಬಿಟಿ ಸಚಿವ ಪ್ರಿಯಾಂಕ ಖರ್ಗೆ ಅವರನ್ನು 'ಫಸ್ಟ್ ಕ್ಲಾಸ್ ಈಡಿಯಟ್' ಎಂದಿದ್ದ ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಅವರಿಗೆ ತಿರುಗೇಟು ನೀಡಿರುವ ಪ್ರಿಯಾಂಕ್ ಖರ್ಗೆ 'ಥರ್ಡ್ ಕ್ಲಾಸ್ ವಂಚಕನಿಂದ ನಾವು ಇನ್ನೇನು ನಿರೀಕ್ಷಿಸಲು ಸಾಧ್ಯ' ಎಂದು ತಿರುಗೇಟು ನೀಡಿದ್ದಾರೆ.

ಅಸ್ಸಾಂನಲ್ಲಿ ಸೆಮಿಕಂಡಕ್ಟರ್ ಘಟಕ ಸ್ಥಾಪನೆಗೆ ಅನುಮತಿ ದೊರೆತ ವಿಚಾರವಾಗಿ ಇಬ್ಬರು ನಾಯಕರ ನಡುವೆ ವಾಗ್ವಾದ ನಡೆಯುತ್ತಿದ್ದು, ಅದು ವೈಯಕ್ತಿಕ ನಿಂದನೆಯ ಮಟ್ಟಕ್ಕೆ ಇಳಿದಿದೆ. ದೊಡ್ಡ ಕೈಗಾರಿಕೆಗಳನ್ನು ಸ್ಥಾಪಿಸಲು ಈಶಾನ್ಯ ರಾಜ್ಯಗಳಲ್ಲಿ ಪ್ರತಿಭೆ ಕೊರೆತೆಯಿದೆ ಎಂಬ ಪ್ರಿಯಾಂಕ್ ಖರ್ಗೆ ಹೇಳಿಕೆಗೆ ಪ್ರತಿಕ್ರಿಯಿಸಿದ್ದ ಬಿಸ್ವಾ, ಪ್ರಿಯಾಂಕ್ ಅವರನ್ನು ಒಬ್ಬ 'ಫಸ್ಟ್ ಕ್ಲಾಸ್ ಈಡಿಯಟ್' ಎಂದು ಕರೆದಿದ್ದರು.



ಈ ಹೇಳಿಕೆ ಕುರಿತು ವರದಿಗಾರರೊಂದಿಗೆ ಮಾತನಾಡಿದ ಪ್ರಿಯಾಂಕ ಖರ್ಗೆ "ಇದು ಅವರ ವರ್ಗ ಸವಲತ್ತು ಮತ್ತು ಕುರ್ಚಿಯ ಕಾರಣದಿಂದಾಗಿ ಅವರಿಗೆ ಸಿಕ್ಕಿರುವ ಸವಲತ್ತನ್ನು ತೋರಿಸುತ್ತದೆ. ಇಲ್ಲದಿದ್ದರೆ, ಅದರಲ್ಲಿ ಏನೂ ಇಲ್ಲ. ಸ್ಪಷ್ಟವಾಗಿ, ಅವರು ನನ್ನ ಹೇಳಿಕೆಗಳನ್ನು ತಪ್ಪಾಗಿ ಅರ್ಥೈಸಿಕೊಳ್ಳುತ್ತಿದ್ದಾರೆ, ಅದನ್ನು ರಾಜಕೀಯಗೊಳಿಸುತ್ತಿದ್ದಾರೆ. ಆದರೆ ಅಸ್ಸಾಂನಿಂದ ಅನೇಕ ಜನರು ತರಬೇತಿಗಾಗಿ ಬೆಂಗಳೂರಿಗೆ ಬರುತ್ತಿದ್ದಾರೆ ಎಂದು ಅವರೇ ಟ್ವೀಟ್ ಮಾಡಿದ್ದರು ಎಂಬುದು ಸತ್ಯ. ನಾವು ಅವರನ್ನು ಸ್ವಾಗತಿಸುತ್ತೇವೆ. ಯಾರೂ ಇಲ್ಲ ಎಂದು ಹೇಳುತ್ತಿಲ್ಲ. ಶರ್ಮಾ ಅವರ ಭಾಷೆ ಅವರ ಹತಾಶೆಯನ್ನು ತೋರಿಸುತ್ತದೆ. ಮೂರನೇ ದರ್ಜೆಯ ವಂಚಕನಿಂದ ನಾವು ಇನ್ನೇನು ನಿರೀಕ್ಷಿಸಬಹುದು?" ಎಂದು ಪ್ರಶ್ನಿಸಿದ್ದಾರೆ.


# ಬೆಂಗಳೂರು | ಕಾರು ಗುದ್ದಿ ಡೆಲಿವರಿ ಬಾಯ್ ಹತ್ಯೆ ಆರೋಪ : ದಂಪತಿ ಬಂಧನ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕಾರು ಗುದ್ದಿ ಗಿಗ್ ಕಾರ್ಮಿಕನನ್ನು (ಡೆಲಿವರಿ ಬಾಯ್) ಹತ್ಯೆಗೈದು, ಅದನ್ನು ರಸ್ತೆ ಅಪಘಾತ ಎಂದು ಬಿಂಬಿಸಿದ್ದ ಆರೋಪದ ಮೇಲೆ ದಂಪತಿಯನ್ನು ಬೆಂಗಳೂರು ದಕ್ಷಿಣ ಪೊಲೀಸರು ಬಂಧಿಸಿದ್ದಾರೆ.

ಅರೆಕೆರೆ ನಿವಾಸಿಗಳಾದ ಮನೋಜ್ (32) ಮತ್ತು ಆತನ ಪತ್ನಿ ಆರತಿ ಶರ್ಮಾ (29) ಬಂಧಿತರು. ಅ.25ರಂದು ತಡರಾತ್ರಿ ಸುಮಾರು 12 ಗಂಟೆಗೆ ನಗರದ ನಟರಾಜ ಲೇಔಟ್‌ನ ಶ್ರೀರಾಮ ದೇವಸ್ಥಾನದ ಬಳಿ ಈ ಘಟನೆ ನಡೆದಿದೆ.

ಕೆಂಬತ್ತಹಳ್ಳಿ ನಿವಾಸಿಯಾದ ದರ್ಶನ್ (22) ಹತ್ಯೆಯಾದ ಡೆಲಿವರಿ ಬಾಯ್. ಈತನ ಸ್ನೇಹಿತ ವರುಣ್ ಗಾಯಗೊಂಡಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಈ ಸಂಬಂಧ ದರ್ಶನ್ ಸಹೋದರಿ ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಿಸಿಕೊಂಡು ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.



ವರದಿಗಳ ಪ್ರಕಾರ, ಮನೋಜ್ ಕಲರಿಪಯಟ್ಟು ತರಬೇತುದಾರನಾದರೆ, ಪತ್ನಿ ಆರತಿ ಶರ್ಮಾ ಖಾಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದರು. ದಂಪತಿ ಕಳೆದ ಎಂಟು ವರ್ಷಗಳಿಂದ ನಗರದಲ್ಲಿ ನೆಲೆಸಿದ್ದಾರೆ. ಕೆಂಬತ್ತಹಳ್ಳಿಯ ದರ್ಶನ್ ಮತ್ತು ಉತ್ತರಹಳ್ಳಿಯ ವರುಣ್ ಸ್ನೇಹಿತರಾಗಿದ್ದು, ಆಹಾರ ಡೆಲಿವರಿ ಬಾಯ್ ಆಗಿ ಕೆಲಸ ಮಾಡುತ್ತಿದ್ದರು. ಮನೋಜ್ ಮತ್ತು ಆರತಿ ಶರ್ಮಾ ಅಕ್ಟೋಬರ್ 25ರಂದು ತಡರಾತ್ರಿ ತಮ್ಮ ಕಾರಿನಲ್ಲಿ ನಟರಾಜ ಲೇಔಟ್ ಮಾರ್ಗವಾಗಿ ಮನೆ ಕಡೆಗೆ ತೆರಳುತ್ತಿದ್ದರು. ಅದೇ ಮಾರ್ಗದಲ್ಲಿ ಎದುರಿನಿಂದ ದರ್ಶನ್ ಮತ್ತು ವರುಣ್ ದ್ವಿಚಕ್ರ ವಾಹನದ ಮೂಲಕ ಮನೆ ಕಡೆಗೆ ಹೊರಟಿದ್ದರು. ಈ ವೇಳೆ ಆಕಸ್ಮಿಕವಾಗಿ ದರ್ಶನ್ ಚಲಾಯಿಸುತ್ತಿದ್ದ ದ್ವಿಚಕ್ರ ವಾಹನ ಮನೋಜ್ ಅವರ ಕಾರಿನ ಮಿರರ್‌ಗೆ ತಾಕಿದೆ. ಅದಕ್ಕಾಗಿ ದರ್ಶನ್ ಕ್ಷಮೆ ಕೇಳಿ ದ್ವಿಚಕ್ರ ವಾಹನ ನಿಲ್ಲಿಸದೆ ಮುಂದಕ್ಕೆ ಹೊರಟ್ಟಿದ್ದಾರೆ.

ಇದರಿಂದ ರೊಚ್ಚಿಗೆದ್ದ ಮನೋಜ್ ದಂಪತಿ, ಕಾರನ್ನು ಯೂ-ಟರ್ನ್ ತೆಗೆದುಕೊಂಡು ಸುಮಾರು 2 ಕಿ.ಮೀ ಹಿಂಬಾಲಿಸಿ ದರ್ಶನ್ ಮತ್ತು ವರುಣ್ ಚಲಾಯಿಸುತ್ತಿದ್ದ ದ್ವಿಚಕ್ರ ವಾಹನಕ್ಕೆ ಹಿಂದಿನಿಂದ ಡಿಕ್ಕಿ ಹೊಡೆದಿದ್ದಾರೆ. ಡಿಕ್ಕಿಯ ರಭಸಕ್ಕೆ ದರ್ಶನ್ ಮತ್ತು ವರುಣ್ ಇಬ್ಬರೂ ರಸ್ತೆಗೆ ಎಸೆಯಲ್ಪಟ್ಟಿದ್ದರು. ದರ್ಶನ್ ಗಂಭೀರವಾಗಿ ಗಾಯಗೊಂಡರೆ, ವರುಣ್ ಸಣ್ಣಪುಟ್ಟ ಗಾಯಗಳೊಂದಿಗೆ ಅಪಾಯದಿಂದ ಪಾರಾಗಿದ್ದರು. ಅಪಘಾತದ ಬಳಿಕ ದಂಪತಿ ಕಾರು ನಿಲ್ಲಿಸದೆ ಸ್ಥಳದಿಂದ ಪರಾರಿಯಾಗಿದ್ದರು. ಗಂಭೀರ ಗಾಯಗೊಂಡಿದ್ದ ದರ್ಶನ್ ಅವರನ್ನು ಸ್ಥಳೀಯರು ಆಸ್ಪತ್ರೆಗೆ ದಾಖಲಿಸಿದ್ದರು. ಆದರೆ, ತೀವ್ರ ರಕ್ತಸ್ರಾವವಾಗಿ ಚಿಕಿತ್ಸೆ ಫಲಿಸದೆ ದರ್ಶನ್ ಸಾವನ್ನಪ್ಪಿದ್ದರು.

ಈ ಸಂಬಂಧ ದರ್ಶನ್ ಸಹೋದರಿ ನೀಡಿದ ದೂರು ಆಧರಿಸಿ ತನಿಖೆ ಕೈಗೊಂಡ ಜೆ.ಪಿ ನಗರ ಸಂಚಾರಿ ಠಾಣೆ ಪೊಲೀಸರು, ಘಟನಾ ಸ್ಥಳದ ಸಿಸಿಟಿವಿ ದೃಶ್ಯಗಳನ್ನು ಪರಿಶೀಲನೆ ನಡೆಸಿದ್ದಾರೆ. ಈ ವೇಳೆ ಮನೋಜ್ ದಂಪತಿ ಉದ್ದೇಶಪೂರ್ವಕವಾಗಿಯೇ ಕಾರು ಗುದ್ದಿ ದರ್ಶನ್ ಸಾವಿಗೆ ಕಾರಣರಾಗಿರುವುದು ಗೊತ್ತಾಗಿದೆ. ಪೊಲೀಸರು ಕಾರಿನ ನೋಂದಣಿ ಸಂಖ್ಯೆ ಮೂಲಕ ದಂಪತಿಯನ್ನು ವಶಕ್ಕೆ ಪಡೆದಿದ್ದರು. ವಿಚಾರಣೆ ವೇಳೆ ಉದ್ದೇಶಪೂರ್ವಕವಾಗಿ ಕಾರು ಗುದ್ದಿರುವುದನ್ನು ದಂಪತಿ ಒಪ್ಪಿಕೊಂಡಿದ್ದಾರೆ. ಹಾಗಾಗಿ, ಜೆ.ಪಿ ನಗರ ಸಂಚಾರಿ ಪೊಲೀಸರು ಪ್ರಕರಣವನ್ನು ಪುಟ್ಟೇನಹಳ್ಳಿ ಠಾಣೆಗೆ ವರ್ಗಾಯಿಸಿದ್ದು, ಅವರು ದಂಪತಿಯನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ ಎಂದು ತಿಳಿದು ಬಂದಿದೆ.

# ಮತದಾರರ ಪಟ್ಟಿಯಲ್ಲಿ ನೋಂದಾಯಿಸಿಕೊಳ್ಳಲು ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

2025ನೇ ಸಾಲಿನ ಪಶ್ಚಿಮ ಪದವೀಧರ ಕ್ಷೇತ್ರದ ಚುನಾವಣೆ ನಿಮಿತ್ತ ಮತದಾರರ ಪಟ್ಟಿಯಲ್ಲಿ ಹೆಸರುಗಳನ್ನು ನೋಂದಾಯಿಸಿಕೊಳ್ಳುವಂತೆ ಸಮಸ್ತ ಪದವೀಧರ ಬಂಧುಗಳಿಗೆ ಉತ್ತರ ಕರ್ನಾಟಕ ಪದವೀಧರ ಒಕ್ಕೂಟದ ರಾಜ್ಯಾಧ್ಯಕ್ಷ ಎಂ.ಎಸ್. ನಾಗರಕಟ್ಟಿ ಮನವಿ ಮಾಡಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಸಮಸ್ತ ಪದವೀಧರರು ಚುನಾವಣಾ ಇಲಾಖೆ ನೀಡಿದ ಕಾಲಾವಕಾಶದಲ್ಲಿ ತಮ್ಮ ಹೆಸರುಗಳನ್ನು ಮತದಾರ ಪಟ್ಟಿಯಲ್ಲಿ ನೋಂದಾಯಿಸಿಕೊಳ್ಳಬೇಕು. ಸರಿಯಾಗಿ ಜಾಗೃತಿ ಮೂಡದಿರುವುದು, ಚುನಾವಣಾ ಇಲಾಖೆಯ ಕಠಿಣ ನಿಯಮಗಳು ಹಾಗೂ ಜನಪ್ರತಿನಿಧಿಗಳ ತಾತ್ಸಾರ ಭಾವನೆಯಿಂದ ನಿಗದಿತ ಗುರಿ ತಲುಪಲಾಗಿಲ್ಲ. ಇದು ಪ್ರಜಾಪ್ರಭುತ್ವ ವ್ಯವಸ್ಥೆಗೆ ಮಾರಕ.

ಸಮಸ್ತ ಪದವೀಧರರಿಗೆ ಸಂವಿಧಾನವು ಮತದಾನದ ಹಕ್ಕು ನೀಡಿ ಗೌರವಿಸಿದೆ. ಇಂತಹ ಮತದಾನ ಹಕ್ಕನ್ನು ನಾವು ಮೊಟಕುಗಳಿಸಿಕೊಳ್ಳಬಾರದು. ಪದವೀಧರರು ಸ್ವಲ್ಪ ಸಮಯವನ್ನು ಮೀಸಲಿಟ್ಟು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರಗಳನ್ನು ನೋಂದಾಯಿಸಿಕೊಳ್ಳಬೇಕು. ವಿದ್ಯಾವಂತರಾದ ನಾವೇ ಮತದಾನದಿಂದ ಹಿಂದೆ ಸರಿದರೆ ಉತ್ತಮ ಸಮಾಜ ನಿರ್ಮಾಣ ಮಾಡುವುದು ಹೇಗೆ ಎಂಬ ಪ್ರಶ್ನೆ ಮೂಡುತ್ತದೆ. ಸಮಸ್ತ ಪದವೀಧರ ಬಂಧುಗಳು ಆದಷ್ಟು ಬೇಗ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳಬೇಕೆಂದು ಎಂ.ಎಸ್ ನಾಗರಕಟ್ಟಿ ಮನವಿ ಮಾಡಿದ್ದಾರೆ.

**ಪುರಸಭೆ ಚುನಾವಣೆಗಳನ್ನು ನಡೆಸಬಾರದು ಎಂದು ನ್ಯಾಯಾಲಯದ ಮೊರೆ ಹೋಗಿರುವದು ಯೋಗ್ಯವಲ್ಲ**

# ಸದಸ್ಯರು ಆತ್ಮಾವಲೋಕನ ಮಾಡಿಕೊಳ್ಳಬೇಕು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪುರಸಭೆ ಸದಸ್ಯರ ಅವಧಿ ಇದೇ ನವೆಂಬರ್ ತಿಂಗಳಲ್ಲಿ ಮುಕ್ತಾಯಗೊಳ್ಳಲಿದ್ದು, ಇದೀಗ ಕಳೆದ ಅವಧಿಯ ಪುರಸಭೆ ಸದಸ್ಯರ ಅಧಿಕಾರಾವಧಿ 30 ತಿಂಗಳು ಪೂರ್ಣಗೊಳ್ಳದಿರುವ ಹಿನ್ನೆಲೆಯಲ್ಲಿ ಅವಧಿ ಪೂರ್ಣಗೊಳಿಸಲು ಸದಸ್ಯರಿಗೆ ಅವಕಾಶ ಮಾಡಿಕೊಡಬೇಕು ಮತ್ತು ಪುರಸಭೆ ಚುನಾವಣೆಗಳನ್ನು ನಡೆಸಬಾರದು ಎಂದು ನ್ಯಾಯಾಲಯದ ಮೊರೆ ಹೋಗಿರುವದು ಯೋಗ್ಯವಾದ ವಿಚಾರವಲ್ಲ ಎಂದು ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣಶೆಟ್ಟಿ ಬಣ) ಅಧ್ಯಕ್ಷ ಮಹೇಶ ಕಲಘಟಗಿ ಮತ್ತು ಯುವ ಮುಖಂಡ ನಾಗರಾಜ ಚಿಂಚಲಿ ಆರೋಪಿಸಿದ್ದಾರೆ.

ಈ ಕುರಿತು ಗುರುವಾರ ಪಟ್ಟಣದ ಪುರಸಭೆ ಮುಖ್ಯಾಧಿಕಾರಿಗಳ ಮೂಲಕ



ಜಿಲ್ಲಾಧಿಕಾರಿಗಳಿಗೆ ಪುರಸಭೆ ಆಡಳಿತ ಮಂಡಳಿಯ ಅವಧಿ ಮುಕ್ತಾಯವನ್ನು ಮುಂದೂಡುವಂತೆ ಸದಸ್ಯರು ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿರುವದನ್ನು ವಿರೋಧಿಸಿ ಸಾರ್ವಜನಿಕರೊಡಗೂಡಿ ಮನವಿ ಸಲ್ಲಿಸಿ ಮಾತನಾಡಿದರು.

ಕೆಲವು ಸದಸ್ಯರು ಅಧ್ಯಕ್ಷ, ಉಪಾಧ್ಯಕ್ಷರ 30 ತಿಂಗಳ ಅವಧಿ ಪೂರ್ಣಗೊಂಡಿಲ್ಲವೆಂಬ ನೆಪ ಇಟ್ಟುಕೊಂಡು ಧಾರವಾಡದ ಉಚ್ಚ ನ್ಯಾಯಾಲಯದಲ್ಲಿ ಪ್ರಕರಣ ದಾಖಲು ಮಾಡಿರುವದು ಎಷ್ಟು ಸಮಂಜಸ ಎನ್ನುವದನ್ನು ಸದಸ್ಯರು ಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದು ಆರೋಪಿಸಿದರು.

ಈಗಿರುವ ಪುರಸಭೆ ಸದಸ್ಯರು ಪಟ್ಟಣದಲ್ಲಿ ಯಾವುದೇ ರೀತಿ ಅಭಿವೃದ್ಧಿ ಕಾರ್ಯಗಳಿಗೆ ಆದ್ಯತೆ ನೀಡಿಲ್ಲ. ಕಳೆದ 5–6 ವರ್ಷಗಳಿಂದ ಇರುವ ನೀರಿನ ಸಮಸ್ಯೆ ಬಗೆಹರಿಸುವ ನಿಟ್ಟಿನಲ್ಲಿಯೂ ಯಾವುದೇ ಸಮರ್ಪಕ ಕ್ರಮಗಳಿಲ್ಲ. ಇವರ ಆಡಳಿತದ ಬಗ್ಗೆ ಜನ ಬೇಸತ್ತಿದ್ದಾರೆ. ಮುಂದಿನ ಚುನಾವಣೆಯಲ್ಲಿ ಅವರು ಮತ್ತೆ ಚುನಾವಣೆಗೆ ಸ್ಪರ್ಧಿಸಿ ಆಯ್ಕೆಯಾಗಿ ಜನಸೇವೆಗೆ ಮುಂದಾಗಲಿ. ಆದರೆ, ಕೋರ್ಟ್‌ಗೆ ಹೋಗುವಂತಹ ನಿರ್ಧಾರ ನಾಚಿಕೆಗೇಡುತನವಾಗಿದೆ ಎಂದು ಆರೋಪಿಸಿದರು.

ಇದೀಗ ಕೋರ್ಟ್‌ನಲ್ಲಿ ಜಿಲ್ಲಾಧಿಕಾರಿಗಳು, ಮುಖ್ಯಾಧಿಕಾರಿಗಳು ಪ್ರತಿವಾದಿಯಾಗಿದ್ದು, ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ, ಸಾರ್ವಜನಿಕರ ಬೇಡಿಕೆ, ಪುರಸಭೆಯಿಂದ ಸದಸ್ಯರು ಪಡೆದುರುವ ಸೌಲಭ್ಯಗಳನ್ನು ಸಲ್ಲಿಸಿ ಈ ಕೇಸು ಕಿತ್ತುಹಾಕುವಂತೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ ಮನವಿ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಮಂಜುನಾಥ ಗಾಂಜಿ, ಮಲ್ಲನಗೌಡ ಪಾಟೀಲ, ಶ್ರೇಯಾಂಕ ಹಿರೇಮಠ, ವೀರೇಶ ಹಗ್ಗರದ, ತೇಜನಗೌಡ ಉದ್ದನಗೌಡ್ರ, ಚಂದ್ರಕಾಂತ ಮುಳಗುಂದ, ಅಭಿ ಬೂದಿಹಾಳ, ಮಂಜು ಕಮತದ, ಪ್ರಕಾಶ ಉದ್ದನಗೌಡ್ರ, ಮಂಜು ಪಾಣಿಗಟ್ಟಿ, ಹಾಲಪ್ಪ ಸಂಕದಾಳ, ದ್ಯಾಮನಗೌಡ ರಾಯರ್, ರವಿ ಉದ್ದನಗೌಡ್ರ, ತೇಜಸ್ವಿನಿ ಸೇರಿದಂತೆ ಅನೇಕರಿದ್ದರು.

ಸದಸ್ಯರ ಅವಧಿ ನವೆಂಬರ್ 4, 2020ರಂದು ಪ್ರಾರಂಭಗೊಂಡಿದ್ದು, ಅಲ್ಲಿಂದ ಇಲ್ಲಿಯವರೆಗೂ ಸರಕಾರದಿಂದ ಬರುವ ಗೌರವಧನವನ್ನು ಸಂಪೂರ್ಣವಾಗಿ ಪಡೆದುಕೊಂಡಿರುತ್ತಾರೆ. ಅಲ್ಲದೆ ಮೀಸಲಾತಿ ಘೋಷಣೆಯಾಗದ ಸಮಯದಲ್ಲಿಯೂ ಸಹ ಗೌರವಧನ ಪಡೆದುಕೊಳ್ಳುವದರ ಜೊತೆ ಪುರಸಭೆ ಸದಸ್ಯರು ಎಂದು ಎಲ್ಲ ಕಾರ್ಯಕ್ರಮಗಳಿಗೆ ಹಾಜರಾಗಿದ್ದಾರೆ. ಆದರೂ ಸಹ ಕೋರ್ಟ್‌ಗೆ ಅವಧಿ ಹೆಚ್ಚಿಸುವಂತೆ ಕೇಳಿಕೊಳ್ಳುವದು ಖಂಡನೀಯ ಎಂದು ಮಹೇಶ ಕಲಘಟಗಿ, ನಾಗರಾಜ ಚಿಂಚಲಿ ಟೀಕಿಸಿದರು.

# ಕಲ್ಲಡ್ಕ ಪ್ರಭಾಕರ ಭಟ್ ಗಡಿಪಾರಗೆ ಆಗ್ರಹ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಎಲ್ಲಾ ಜಾತಿ, ಧರ್ಮದ ಸಮುದಾಯಗಳು ತಮ್ಮ-ತಮ್ಮ ಹಬ್ಬ, ಆಚರಣೆಗಳನ್ನು ಶಾಂತಿಯಿಂದ ಆಚರಿಸುತ್ತ, ನೆಮ್ಮದಿಯಿಂದ ಜೀವನವನ್ನು ನಡೆಸುತ್ತಿದ್ದಾರೆ. ಇಂತಹ ಸೌಹಾರ್ದತೆಯ ವಾತಾವರಣ ಹಾಳು ಮಾಡುವ ಉದ್ದೇಶದಿಂದ ಕೋಮುವಾದಿ ಕಲ್ಲಡ್ಕ ಪ್ರಭಾಕರ ಭಟ್ ಒಂದು ಸಮುದಾಯದ ಮಹಿಳೆಯರ ಬಗ್ಗೆ ಪ್ರಚೋದನಕಾರಿ ಹೇಳಿಕೆ ನೀಡಿರುವುದನ್ನು ಖಂಡಿಸಿರುವ ಸ್ಲಂ ಜನಾಂದೋಲನ-ಕರ್ನಾಟಕ ಸಮಿತಿ ಸಹಕಾರದಲ್ಲಿ ಗದಗ ಜಿಲ್ಲಾ ಸ್ಲಂ ಮಹಿಳಾ ಸಮಿತಿ ಪದಾಧಿಕಾರಿಗಳು ಕೂಡಲೇ ಇಂತಹ ಕೋಮುವಾದಿಗಳನ್ನು ರಾಜ್ಯದಿಂದ ಗಡಿಪಾರ ಮಾಡಬೇಕೆಂದು ಆಗ್ರಹಿಸಿ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ ಮಾತನಾಡಿ, ಕಲ್ಲಡ್ಕ ಪ್ರಭಾಕರ ಭಟ್ ಪುತ್ತೂರಿನಲ್ಲಿ ನಡೆದ ಖಾಸಗಿ ಕಾರ್ಯಕ್ರಮದಲ್ಲಿ ಮಹಿಳೆಯರನ್ನು ನಿಂದಿಸಿದ್ದಾರೆ. ಒಂದು ಸಮುದಾಯದ ಮಹಿಳೆಯರ ಹೆರಿಗೆ ಕುರಿತು ಮತ್ತು ಆ ಸಮುದಾಯದಲ್ಲಿ ಹುಟ್ಟುವ ಮಕ್ಕಳ ಬಗ್ಗೆ ತುಂಬಾ ಕೀಳಾಗಿ ಮಾತನಾಡಿದ್ದಾರೆ. ಸಮುದಾಯದ ನಡುವೆ ಕೋಮು ಸಂಘರ್ಷಕ್ಕೆ ಪ್ರಚೋದನೆ ನೀಡುತ್ತಿದ್ದಾರೆ. ಪದೇ ಪದೇ ಒಂದು ಸಮುದಾಯದ ಮಹಿಳೆಯರ ಕುರಿತು ಅವಹೇಳನಕಾರಿಯಾಗಿ ಮಾತನಾಡಿ ರಾಜ್ಯದಲ್ಲಿ ಕೋಮು ಗಲಭೆ ನಡೆಸಲು ಹುನ್ನಾರ ನಡೆಸುತ್ತಿರುವುದು ಖಂಡನೀಯ ಎಂದರು.

ಮಹಿಳಾ ಸಮಿತಿ ಮುಖಂಡರಾದ ನೀಲಮ್ಮ ಹಡಪದ ಮಾತನಾಡಿ, ಪದೇ-ಪದೇ ಮಹಿಳೆಯರ ಬಗ್ಗೆ ಅವಹೇಳಕಾರಿ ಮಾತನಾಡುತ್ತಿರುವ ಮಹಿಳಾ ವಿರೋಧಿ ಕಲ್ಲಡ್ಕ ಪ್ರಭಾಕರ ಭಟ್ ವಿರುದ್ಧ ರಾಜ್ಯ ಸರ್ಕಾರ ಕಠಿಣ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಹಿಳಾ ಸಮಿತಿ ಮುಖಂಡರಾದ ಮೆಹರುನಿಸಾ ಡಂಬಳ, ಪ್ರೇಮಾ ಮಣ್ಣವಡ್ಡರ, ಮೈಮುನ ಬೈರಕದಾರ, ಸಾಕ್ರುಬಾಯಿ ಗೋಸಾವಿ, ಆಯೀಸಾ ಹೆಚ್, ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ, ಮಕ್ತುಮಸಾಬ ಮುಲ್ಲಾನವರ, ದುರ್ಗಪ್ಪ ಮಣ್ಣವಡ್ಡರ, ಮಂಜುಬಾಯಿ ಗೋಸಾವಿ, ಶಮಶಾದಬೇಗಂ ಬೈರಕದಾರ, ಲಕ್ಷ್ಮೀಬಾಯಿ ಗೋಸಾವಿ, ಖಾಜಾಸಾಬ ಇಸ್ಮಾಯಿಲನವರ, ಸೋನಾಬಾಯಿ ಗೋಸಾವಿ ಸೇರಿದಂತೆ ವಿವಿಧ ಸ್ಲಂ ಪ್ರದೇಶದ ನೂರಾರು ಮಹಿಳಾ ಮುಖಂಡರು ಉಪಸ್ಥಿತರಿದ್ದರು.

# ಬಸವಣ್ಣನವರ ದಾಸೋಹ ನಮಗೆ ಆದರ್ಶ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಮಹಾನ್ ಮಾನವತಾವಾದಿ ಬಸವಣ್ಣನವರು 12ನೇ ಶತಮಾನದಲ್ಲಿ ಮಾಡಿ ತೋರಿಸಿದ ದಾಸೋಹ ನಮಗೆಲ್ಲ ಆದರ್ಶವಾಗಿದೆ. ಅದರಲ್ಲಿ ನಿನ್ನಲ್ಲಿರುವುದನ್ನು ಎಲ್ಲರೊಂದಿಗೆ ಹಂಚಿಕೊಂಡು ತಿನ್ನು ಎಂಬ ತತ್ವವಿದೆ. ಅದನ್ನು ನಾವೂ ನಮ್ಮ ಬದುಕಿನಲ್ಲಿ ಅಳವಡಿಸಿಕೊಂಡರೆ ನಮ್ಮ ಬದುಕು ಬಂಗಾರವಾಗುತ್ತದೆ ಎಂದು ನಿವೃತ್ತ ಮುಖ್ಯ ಶಿಕ್ಷಕ ಸಿ.ವಿ. ವಂಕಲಕುಂಟಿ ಹೇಳಿದರು.

ಪಟ್ಟಣದ ಹಿರೇಮಠದ ಸಭಾಭವನದಲ್ಲಿ ನಡೆದ ನಿವೃತ್ತ ನೌಕರರ ಮತ್ತು ಹಿರಿಯ ನಾಗರಿಕರ ಸಭೆಯಲ್ಲಿ ಅವರು ಮಾತನಾಡಿದರು.

ಇಂದಿನ ದಿನಗಳಲ್ಲಿ ಹಿರಿಯ ನಾಗರಿಕರು ಇಲ್ಲದ ಉಸಾಬರಿ ನಮಗೇಕೆ ಬೇಕು ಎಂದು ಉದಾಸೀನ ಮನೋಭಾವವನ್ನು ಹೊಂದುವುದು ಸಾಮಾನ್ಯ. ಅದರ ಬದಲಾಗಿ ಪಟ್ಟಣದಲ್ಲಿ ಏನು ನಡೆಯುತ್ತಿದೆ, ಅಭಿವೃದ್ಧಿ ಕಾರ್ಯಗಳು ಹೇಗೆ ನಡೆಯುತ್ತಿವೆ ಎಂಬುದನ್ನು ಯೋಚಿಸಬೇಕು. ಏಕೆಂದರೆ ನಾವು ವಾಸಿಸುತ್ತಿರುವ ಪಟ್ಟಣದಲ್ಲಿನ ಪ್ರತಿ ಸಂಗತಿಯೂ ನಮಗೂ ಸಂಬಂಧಪಟ್ಟಿರುತ್ತದೆ. ಏನಾದರೂ ಕುಂದು-ಕೊರತೆ ಕಂಡು ಬಂದರೆ ಅದನ್ನು ಯಾವ ಮುಲಾಜು ಇಲ್ಲದೆ ಸಂಬಂಧಿಸಿದವರಿಗೆ ತಿಳಿಸುವಂತಾಗಬೇಕೆಂದರು.

ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ಡಿ.ಎ. ಅರವಟಗಿಮಠ ಮಾತನಾಡಿ, ಹಿರಿಯ ನಾಗರಿಕರಿಗೆ ಬ್ಯಾಂಕಿನಲ್ಲಿ ಸಿಗುವ ಸೌಲಭ್ಯಗಳ ವಿವರಣೆ ನೀಡಿದರು. ಬರುವ ಡಿಸೆಂಬರ್‌ನಲ್ಲಿ ಸಂಘದ ವಾರ್ಷಿಕೋತ್ಸವವನ್ನು ಆಚರಿಸುವ ಬಗ್ಗೆ ಚರ್ಚಿಸಿದರು.

ಜಿ.ಎ. ಬೆಲ್ಲದ ಪ್ರಾರ್ಥಿಸಿ, ಸ್ವಾಗತಿಸಿದರು. ವಿ.ಬಿ. ಮೇಟಿ ವಂದಿಸಿದರು. ಸಭೆಯಲ್ಲಿ ಬಿ.ಎಸ್. ಉಪ್ಪಿನ, ಕಾಶಪ್ಪ ಸಂಗನಾಳ, ಎಸ್.ಜಿ. ಮಾಳಗೌಡ್ರ, ಬಿ.ವಿ. ಬಳಿಗೇರ, ವಿ.ಎಸ್. ಕೊಟಗಿ, ಎಚ್.ಕೆ. ಜೋಗಿ, ಕೆ.ಎಸ್. ಕಳಕಣ್ಣವರ ಮುಂತಾದವರಿದ್ದರು.

# ಸಿಸಿ ರಸ್ತೆ ನಿರ್ಮಿಸಲು ಮನವಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸವಣೂರ ರಸ್ತೆಗೆ ಹೊಂದಿಕೊಂಡಿರುವ ಗುಲಗಂಜಿಕೊಪ್ಪದ ಮುಖ್ಯ ದ್ವಾರದಿಂದ, ದುಂಡಿಬಸವೇಶ್ವರ ಮಾರ್ಗವಾಗಿ ಲಕ್ಷ್ಮೇಶ್ವರಕ್ಕೆ ಇರುವ ಮುಖ್ಯ ರಸ್ತೆ ಸಂಪೂರ್ಣ ಹದಗೆಟ್ಟಿದ್ದು, ಈ ಪ್ರಮುಖ ರಸ್ತೆಯನ್ನು ಸಿಸಿ ರಸ್ತೆಯನ್ನಾಗಿ ನಿರ್ಮಿಸುವಂತೆ ಆಗ್ರಹಿಸಿ ತಹಸೀಲ್ದಾರರ ಮೂಲಕ ಗದಗ ಜಿಲ್ಲಾ ಲೋಕೋಪಯೋಗಿ ಇಲಾಖೆಗೆ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ರಕ್ಷಣೆ ಮತ್ತು ಭ್ರಷ್ಟಾಚಾರ ನಿರ್ಮೂಲನಾ ಸಮಿತಿ ವತಿಯಿಂದ ಗುರುವಾರ ಮನವಿ ಸಲ್ಲಿಸಿದರು.



ಈ ರಸ್ತೆಯಲ್ಲಿ ನಿತ್ಯ ನೂರಾರು ವಿದ್ಯಾರ್ಥಿಗಳು ಶಾಲಾ-ಕಾಲೇಜುಗಳಿಗೆ ತೆರಳುತ್ತಿದ್ದು, ನೂರಾರು ಎಕರೆ ಭೂಮಿಯನ್ನು ಹೊಂದಿರುವ ರೈತರಿಗೂ ಅಡ್ಡಾಡಲು ದುಸ್ತರವಾಗಿದೆ. ರೈತರ ಬೆಳೆ ಕೈಗೆ ಬಂದಾಗ ಅದನ್ನು ತರಲು ರೈತರು ಪರದಾಡುವಂತಾಗುತ್ತಿದ್ದು, ಕೂಡಲೇ ಸಿಸಿ ರಸ್ತೆ ನಿರ್ಮಿಸಿ ರೈತರಿಗೆ, ವಿದ್ಯಾರ್ಥಿಗಳಿಗೆ, ಸಾರ್ವಜನಿಕರಿಗೆ ಅನೂಕೂಲ ಮಾಡಿಕೊಡಬೇಕು ಎಂದು ಮನವಿ ಮಾಡಿದರು.

ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ ಮನವಿ ಸ್ವೀಕರಿಸಿದರು. ಈ ವೇಳೆ ಸಮಿತಿಯ ಅಧ್ಯಕ್ಷ ಮಂಜುನಾಥ ಮಾದರ, ಉಪಾಧ್ಯಕ್ಷ ಮಾಂತೇಶ ಪೂಜಾರ, ಕಾರ್ಯದರ್ಶಿ ಕಾರ್ತಿಕ ದೊಡ್ಡಮನಿ, ಗೌರವಾಧ್ಯಕ್ಷ ರಮೇಶ ಹರಿಜನ, ಪರಮೇಶ ಮ್ಯಾಗೇರಿ, ಶಿವಾನಂದ ತಳಗೇರಿ, ಭರಮಪ್ಪ ನಡುವಿನಮನಿ, ಅರುಣ ತಳಗೇರಿ, ಫಕೀರೇಶ ಹರಿಜನ, ತಿಪ್ಪಣ್ಣ ಹರಿಜನ, ಮಂಜುನಾಥ ಹರಿಜನ, ಗುರುನಾಥ ಕಲ್ಮಣಿ, ರವಿಕುಮಾರ ಹರಿಜನ, ವಿನೋದ ಪೂಜಾರ, ರಾಜು ಹಾದರಗೇರಿ ಮುಂತಾದವರಿದ್ದರು.

# ಜಿಲ್ಲಾ ಚೆನ್ನದಾಸರ ಸಮಾಜ ಸಂಘದ ಸಭೆ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಚೆನ್ನದಾಸರ ಸಮಾಜ (ಪ.ಜಾತಿ) ಸಂಘ ಗದಗ ಇದರ ಅಧ್ಯಕ್ಷರು ಹಾಗೂ ಕಾರ್ಯಕಾರಿಣಿ ಮಂಡಳಿಯ ಸೂಚನೆಯಂತೆ ನವೆಂಬರ್ 1ರಂದು ಬೆಳಿಗ್ಗೆ 10.15ಕ್ಕೆ ಕರಿಯಮ್ಮಕಲ್ ಬಡಾವಣೆಯ ಶ್ರೀ ಕರಿಯಮ್ಮ ದೇವಸ್ಥಾನದ ಹತ್ತಿರ ನಿವೃತ್ತ ಶಿಕ್ಷಕ ಟಿ.ಎಮ್. ದಂಡಗಿ ಇವರ ಮನೆಯ ಆವರಣದಲ್ಲಿ ಸಾಮಾನ್ಯ ಸಭೆಯನ್ನು ಕರೆಯಲಾಗಿದೆ.

ಆಗಸ್ಟ್‌ನಿಂದ ಅಕ್ಟೋಬರ್ ತಿಂಗಳಲ್ಲಿ ಸಂಘ ಕೈಗೊಂಡ ಕಾರ್ಯಗಳ ವರದಿ ಒಪ್ಪಿಸುವುದು, ಸಂಘದ ಉದ್ಘಾಟನೆ ಹಾಗೂ ಪಧಾದಿಕಾರಿಗಳ ಪದಗ್ರಹಣ ಮತ್ತು ವಧು-ವರರ ಕಾರ್ಯಕ್ರಮಗಳನ್ನು ಒಂದೇ ವೇದಿಕೆಯಲ್ಲಿ ಮಾಡುವ ಸಲುವಾಗಿ ಚರ್ಚಿಸಲಾಗುವುದು.

ಸಂಘದ ಕಾರ್ಯಕಾರಿಣಿ ಮಂಡಳಿಯ ಸರ್ವ ಸದಸ್ಯರು ಮತ್ತು ಗದಗ ಜಿಲ್ಲಾ ಚೆನ್ನದಾಸರ ಸಮಾಜ ಭಾಂದವರು ಸಭೆಗೆ ಹಾಜರಾಗಿ ಸಲಹೆ-ಸೂಚನೆ ನೀಡುವಂತೆ ಸಂಘದ ಪ್ರಕಟಣೆ ವಿನಂತಿಸಿದೆ.

# 'ಆರಂಭ್ 2025' ಸ್ವಾಗತ ಸಮಾರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ಇಂಜಿನಿಯರಿಂಗ್ ವಿಭಾಗವು 'ಆರಂಭ್-2025' ಶೀರ್ಷಿಕೆಯಡಿ 3ನೇ ಸೆಮಿಸ್ಟರ್ ವಿದ್ಯಾರ್ಥಿಗಳಿಗಾಗಿ ಸ್ವಾಗತ ಸಮಾರಂಭವನ್ನು ಸಿವಿಲ್ ವಿಭಾಗದ ಸಮ್ಮೇಳನ ಸಭಾಂಗಣದಲ್ಲಿ ಆಯೋಜಿಸಿತ್ತು.

ಕಾರ್ಯಕ್ರಮಕ್ಕೆ ಈನೋವೊಯರ್ ಟೆಕ್ನಾಲಜೀಸ್ ಬೆಂಗಳೂರು ಸಂಸ್ಥೆಯ ಸಂಸ್ಥಾಪಕ ಮತ್ತು ನಿರ್ದೇಶಕರಾದ ಪ್ರವೀಣ ಕಲ್ಮಠ್ ಮುಖ್ಯ ಅತಿಥಿಗಳಾಗಿ



ಆಗಮಿಸಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿ, ಅಕಾಡೆಮಿಕ್ ಅಧ್ಯಯನದ ಜೊತೆಗೆ ತಾಂತ್ರಿಕ ಕೌಶಲ್ಯಗಳನ್ನು ವೃದ್ಧಿಸಿಕೊಳ್ಳುವ ಅಗತ್ಯವನ್ನು ವಿವರಿಸಿದರು.

ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲ ಡಾ. ಎಂ.ಎಂ. ಅವಾಟಿ ಅಧ್ಯಕ್ಷತೆ ವಹಿಸಿದ್ದರು. ಎಲ್ಲಾ ಇಸಿಇ ವಿಭಾಗದ ಬೋಧಕ ವರ್ಗ ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಧಾರವಾಡ ತಾಲೂಲು ಗ್ಯಾರಂಟಿ ಸಮಿತಿ ಸಭೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಗ್ರಾಮ ಪಂಚಾಯಿತಿ ಮಟ್ಟದ ಸಭೆಗಳು ಈಗಾಗಲೇ ಜರುಗಿದ್ದು, ಪಂಚ ಗ್ಯಾರಂಟಿ ಯೋಜನೆಯನ್ನು ಅರ್ಹ ಫಲಾನುಭವಿಗಳ ಮನೆ ಬಾಗಿಲಿಗೆ ತಲುಪಿಸುವದು ಈ ಸಭೆಯ ಉದ್ದೇಶವಾಗಿದೆ ಎಂದು ಧಾರವಾಡ ತಾಲೂಕು ಗ್ಯಾರಂಟಿ ಸಮಿತಿಯ ಅಧ್ಯಕ್ಷ ಅರವಿಂದಗೌಡ ಏಗನಗೌಡರ ಹೇಳಿದರು.

ಗುರುವಾರ ನಡೆದ ಧಾರವಾಡ ತಾಲೂಕು ಗ್ಯಾರಂಟಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಂತ ಹಂತವಾಗಿ ಧಾರವಾಡ ತಾಲೂಕಿನ ಪ್ರತಿಯೊಂದು ಗ್ರಾಮ ಪಂಚಾಯಿತಿಯಲ್ಲಿ ಸಭೆ ಆಯೋಜಿಸಿ, ಕುಂದು-ಕೊರತೆ




ಆಲಿಸಿ, ಸ್ಥಳದಲ್ಲಿಯೇ ಪರಿಹಾರ ಒದಗಿಸಲು ಪ್ರಯತ್ನಿಸೋಣ ಎಂದು ತಾಲೂಕಾ ಮಟ್ಟದ ಅಧಿಕಾರಿಗಳಿಗೆ ಕರೆ ನೀಡಿದರು.

ಸಭೆಯಲ್ಲಿ ಗ್ಯಾರಂಟಿ ಯೋಜನೆ ಸಮಿತಿ ಸದಸ್ಯರಾದ ಚಂದ್ರಶೇಖರ ಕದಂ, ಪರಮೇಶ್ವರ ಕರಿಕಟ್ಟಿ, ಮಂಜುನಾಥ ಉಡಿಕೇರಿ, ಮಿಲಿಂದ ಇಚಂಗಿ, ರಾಜೇಶ ಚವ್ಹಾಣ, ಜಾಫರ ಕಳ್ಳಿಮನಿ, ಕಲಾವತಿ ಭೀಮಕ್ಕನವರ, ಮೈಲಾರಗೌಡ ಪಾಟೀಲ, ಕಾರ್ತಿಕ ಗೋಕಾಕ, ಪರಮೇಶ್ವರ ಕಾಳೆ, ಸಮಿತಿಯ ಸದಸ್ಯ ಕಾರ್ಯದರ್ಶಿ ಗಂಗಾಧರ ಕಂದಕೂರ, ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಮಟ್ಟದ ಪಂಚ ಗ್ಯಾರಂಟಿ ಅನುಷ್ಠಾನ ಅಧಿಕಾರಿಗಳು ಹಾಜರಿದ್ದರು.

# ವಿವಿಧ ಜಯಂತಿಗಳ ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ನವೆಂಬರ್ 8ರಂದು ಬೆಳಿಗ್ಗೆ 11 ಗಂಟೆಗೆ ಶ್ರೀ ಕನಕದಾಸರ ಜಯಂತಿ, ನವೆಂಬರ್ 11ರಂದು ಬೆಳಿಗ್ಗೆ 11 ಗಂಟೆಗೆ ವೀರವನಿತೆ ಒನಕೆ ಓಬವ್ವ ಜಯಂತಿಯನ್ನು ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಹೇಳಿದರು.



ಅವರು ಗುರುವಾರ ಸಂಜೆ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಭವನದಲ್ಲಿ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಯಂತಿ ಕಾರ್ಯಕ್ರಮವನ್ನು ನಾವೆಲ್ಲರೂ ಪ್ರತಿವರ್ಷದಂತೆ ವಿಜೃಂಭಣೆಯಿಂದ ಆಚರಿಸೋಣ ಎಂದು ತಿಳಿಸಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಸಮಾಜದ ಹಿರಿಯ ಮುಖಂಡರು ಹಾಗೂ ಸಾರ್ವಜನಿಕರು ಸಭೆಯಲ್ಲಿ ಉಪಸ್ಥಿತರಿದ್ದರು.

**ನಿವೃತ್ತರಾಗಲಿರುವ ಬಸನಗೌಡ ಕ.ನಿಂಬನಗೌಡರರಿಗೆ ಅ. 31ರಂದು ಬಸವೇಶ್ವರ ಪ್ರೌಢಶಾಲೆಯಲ್ಲಿ ಸನ್ಮಾನ**

# ಸಾವಿರಾರು ಬಡ ವಿದ್ಯಾರ್ಥಿಗಳ ದಾರಿದೀಪ

■ವಿಜಯಸಾಕ್ಷಿ ಸುದ್ದಿ, ಡಂಬಳ

ತಮ್ಮ ಸೇವೆಯ ಪ್ರಾರಂಭದಿಂದ ಹಿಡಿದು ಪ್ರಾಮಾಣಿಕ ಕಲಿಕೆಯ ಮೂಲಕ ಸಾವಿರಾರು ಪ್ರತಿಭಾವಂತ ವಿದ್ಯಾರ್ಥಿಗಳ ಭವಿಷ್ಯ ರೂಪಿಸಿದ, ಬಸವೇಶ್ವರ ಪ್ರೌಢಶಾಲೆಯಲ್ಲಿ 39ವರ್ಷಗಳ ಕಾಲ ಸೇವೆ ಸಲ್ಲಿಸಿ ನಿವೃತ್ತರಾಗಲಿರುವ ಬಸನಗೌಡ ಕ.ನಿಂಬನಗೌಡರ ಅವರಿಗೆ ಅ. 31ರಂದು ಸಂಜೆ 4ಕ್ಕೆ ಬಸವೇಶ್ವರ ಪ್ರೌಢಶಾಲೆಯಲ್ಲಿ ಸನ್ಮಾನ ಜರುಗಲಿದೆ.

ಕಲ್ಲನಗೌಡ, ಪಾರ್ವತಮ್ಮ ಅವರು ಬಿ.ಕೆ. ನಿಂಬನಗೌಡರ ಅವರ ತಂದೆ ತಾಯಿಗಳು. ಧಾರವಾಡದ ಸರಕಾರಿ ಗಂಡು ಮಕ್ಕಳ ಶಾಲೆ, ಧಾರವಾಡದ ನ್ಯೂ ಇಂಗ್ಲೀಷ್ ಹೈಸ್ಕೂಲ್, ಕಾಲೇಜು ಶಿಕ್ಷಣದ ನಂತರ ಡಿಎಂಸಿ ಡ್ರಾಯಿಂಗ್ ಮಾಸ್ಟರ್ ಸರ್ಟಿಫಿಕೇಟ್, ಕ್ರಾಫ್ಟ್ ಟೀಚರ ಕೋರ್ಸ್ ಪಡೆದರು. ನಂತರ ಮುತ್ತವ್ವ ಅವರನ್ನು ಕೈಹಿಡಿದರು.

ಡಂಬಳ ಗ್ರಾಮದ ಪ್ರತಿಷ್ಠಿತ ಜಗದ್ಗುರು ತೋಂಟದಾರ್ಯ



ಪ್ರೌಢಶಾಲೆಯಲ್ಲಿ ವೃತ್ತಿ ಶಿಕ್ಷಕರಾಗಿ ವೃತ್ತಿಯನ್ನು ಆರಂಭಿಸಿ ಡಂಬಳ ಗ್ರಾಮದಲ್ಲಿ 13 ವರ್ಷ ಸೇವೆ ಸಲ್ಲಿಸಿದರು. ನಂತರ ಗದಗ ಬಸವೇಶ್ವರ ಪ್ರೌಢಶಾಲೆಯಲ್ಲಿ 15ವರ್ಷಗಳ ಸೇವೆ. ಮತ್ತೆ ಡಂಬಳ ಗ್ರಾಮದ ತೊಂಟ-ದಾರ್ಯ ಪ್ರೌಢಶಾಲೆಯಲ್ಲಿ 10 ವರ್ಷ ಸೇವೆ ಸಲ್ಲಿಸಿ ಮತ್ತೆ ಬಸವೇಶ್ವರ ಪ್ರೌಢಶಾಲೆಯಲ್ಲಿ 2 ವರ್ಷ ಸೇವೆ ಸಲ್ಲಿಸಿ 39 ವರ್ಷಗಳ ಕಾಲ ಸುದೀರ್ಘ ಸೇವೆ ಸಲ್ಲಿಸುವುದರ ಮೂಲಕ ಸಾವಿರಾರು ಬಡ ವಿದ್ಯಾರ್ಥಿಗಳಿಗೆ ದಾರಿದೀಪವಾಗಿದ್ದಾರೆ.

ಕರ್ನಾಟಕ ರಾಜ್ಯದ ವೃತ್ತಿ ಶಿಕ್ಷಕರ ಸಂಘದ ಸಹಾಯಕ ಕಾರ್ಯದರ್ಶಿಯಾಗಿ, ಪ್ರಸ್ತುತ ಗದಗ ಜಿಲ್ಲಾ ವೃತ್ತಿ ಶಿಕ್ಷಕರ ಸಂಘದ ಅಧ್ಯಕ್ಷರಾಗಿ ನೂರಾರು ಶಿಕ್ಷಕರ ಹಿತಕ್ಕಾಗಿ ಶ್ರಮಿಸಿದ ಶ್ರೇಯಸ್ಸು ಇವರದಾಗಿದೆ. ವಿದ್ಯಾರ್ಥಿಗಳು ಸಮಸ್ಯೆಯೆಂದು ಬಂದಾಗ ಅವರ ಕಲಿಕಾ ಸಹಾಯಕ್ಕೆ ನಿಂತು ಅವರನ್ನು ಉನ್ನತ ಶಿಕ್ಷಣವಂತರನ್ನಾಗಿ ಮಾಡಿದ ಶ್ರೇಯಸ್ಸು ಇವರಿಗೆ ಸಲ್ಲುತ್ತದೆ.

ಚಿತ್ರಕಲಾ ಬೋಧನಾ ಕೌಶಲ್ಯದ ಮೂಲಕ ಇವರು ಗ್ರಾಮೀಣ ಮಕ್ಕಳ ಆಶಾಕಿರಣವಾಗಿ ಸಾವಿರಾರು ವಿದ್ಯಾರ್ಥಿಗಳ ಭವಿಷ್ಯವನ್ನು ರೂಪಿಸಿ ಹಲವು ಉನ್ನತ ಹುದ್ದೆಗಳನ್ನು ಹೊಂದುವಂತೆ ಮಾಡಿದ್ದಾರೆ. ಚಿತ್ರಕಲಾ ತರಗತಿಗೆ ಜೀವ ತುಂಬಿದ ಗುರುಗಳೆಂದರೆ ಬಿ.ಕೆ. ನಿಂಬನಗೌಡರ. ಅವರ ಕಲೆಯನ್ನು ಕೇವಲ ಪಾಠವಲ್ಲ, ಜೀವನವನ್ನೇ ನೋಡುವ ದೃಷ್ಟಿಕೋನವೆಂದು ಕಲಿಸಿದ ಗುರುಗಳಾಗಿ ವಿದ್ಯಾರ್ಥಿಗಳ ಭವಿಷ್ಯದ ಕನಸುಗಳನ್ನು ಮೂಡಿಸಲು ಶ್ರಮಿಸಿದವರು.

ವಿದ್ಯಾರ್ಥಿಗಳು ಭವಿಷ್ಯ ನಿರ್ಮಿಸುವ ನಾಯಕರಾಗಿದ್ದು, ಅವರ ಕುರಿತು ಪ್ರತಿಯೊಬ್ಬರೂ ಚಿಂತನೆ ಮಾಡುವುದರ ಮೂಲಕ ಅವರ ಭವಿಷ್ಯವನ್ನು ಕಟ್ಟಲು ಪ್ರತಿಯೊಬ್ಬರೂ ಮುಂದಾಗಬೇಕು.

**– ಬಿ.ಕೆ. ನಿಂಬನಗೌಡರ.**
ನಿವೃತ್ತಿ ಹೊಂದಲಿರುವ ಶಿಕ್ಷಕ.

ವಿದ್ಯಾರ್ಥಿಗಳ ಉತ್ತಮ ಜೀವನ ನಿರ್ಮಿಸಲು ಗುರುಗಳಾದ ಬಿ.ಕೆ. ನಿಂಬನಗೌಡರ ಅವರು ಜಗದ್ಗುರು ತೋಂಟದಾರ್ಯ ಮಠದ ಶಿಕ್ಷಣ ಸಂಸ್ಥೆಯಲ್ಲಿ ಉತ್ತಮ ಸೇವೆ ಸಲ್ಲಿಸಿ, ನಿರಂತವಾಗಿ ಸಾವಿರಾರು ವಿದ್ಯಾರ್ಥಿಗಳಿಗೆ ಜ್ಞಾನದಾಸೋಹ ನೀಡುವುದರ ಮೂಲಕ ಉತ್ತಮ ಭವಿಷ್ಯ ಕಟ್ಟಿದ್ದಾರೆ.

**– ಶಿವಾನಂದ ಪಟ್ಟಣಶೆಟ್ಟರ.**
ತೋಂಟದಾರ್ಯ ಮಠದ ಕಾರ್ಯದರ್ಶಿಗಳು.

ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಂಡ ನಾಡಗೀತೆ ಗಾಯನ ಸ್ಪರ್ಧೆ ಉದ್ಘಾಟಿಸಿದ ತಾ.ಪಂ ಇಓ ಕೃಷ್ಣಪ್ಪ ಧರ್ಮರ

# ಕನ್ನಡ ನಾಡು-ನುಡಿ ನಮ್ಮ ಅಸ್ಮಿತೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಾವಿರಾರು ವರ್ಷಗಳ ಭವ್ಯ ಇತಿಹಾಸ ಹೊಂದಿರುವ ಕನ್ನಡ ನಾಡು, ಶ್ರೀಮಂತ ಸಾಂಸ್ಕೃತಿಕ ಪರಂಪರೆಯ ಪ್ರತೀಕವಾಗಿದೆ. ಕನ್ನಡ ಭಾಷೆಯನ್ನು ಉಳಿಸಿ-ಬೆಳೆಸುವದು ಪ್ರತಿಯೊಬ್ಬ ಕನ್ನಡಿಗರ ಕರ್ತವ್ಯವಾಗಿದ್ದು, ಕನ್ನಡ ನಾಡು-ನುಡಿ ನಮ್ಮ ಅಸ್ಮಿತೆಯಾಗಿದೆ ಎಂದು ತಾ.ಪಂ ಇಓ ಕೃಷ್ಣಪ್ಪ ಧರ್ಮರ ಅಭಿಪ್ರಾಯಪಟ್ಟರು.

ಅವರು ತಾಲೂಕು ಆಡಳಿತ, ತಾಲೂಕು ಪಂಚಾಯಿತಿ ಲಕ್ಷ್ಮೇಶ್ವರ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಶಿರಹಟ್ಟಿ ಹಾಗೂ ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತು ಲಕ್ಷ್ಮೇಶ್ವರ ಇವುಗಳ ಸಂಯುಕ್ತ ಆಶ್ರಯದಲ್ಲಿ ರಾಜ್ಯೋತ್ಸವ ಹಾಗೂ ರಾಷ್ಟ್ರಕವಿ ಕುವೆಂಪು ವಿರಚಿತ 'ಜೈ ಭಾರತ ಜನನಿಯ ತನುಜಾತೆ' ಕನ್ನಡ ನಾಡಗೀತೆಗೆ ನೂರು ವರ್ಷಗಳು ಸಂದ ಸಂಭ್ರಮದ ಪ್ರಯುಕ್ತ ಗುರುವಾರ ಪಟ್ಟಣದ ಸೆವೆಂತ್ ಡೇ ಅಡ್ವೆಂಟಿಸ್ಟ್ ಶಾಲೆಯಲ್ಲಿ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಂಡ ನಾಡಗೀತೆ ಗಾಯನ ಸ್ಪರ್ಧೆಯನ್ನು ಉದ್ಘಾಟಿಸಿ ಮಾತನಾಡಿರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯ್ಕ ಮಾತನಾಡಿ, ಕನ್ನಡದ ಅಭಿವೃದ್ಧಿ ಕೇವಲ ಮಾತುಗಳಿಂದ ಮಾತ್ರ ಸಾಧ್ಯವಿಲ್ಲ. ಕಿಂಚಿತ್ತಾದರೂ ಕೃತಿಯ ಮೂಲಕ ಸಾಧಿಸಬೇಕಿದೆ. ನಾವು ಕನ್ನಡವನ್ನು ಉಳಿಸಬೇಕಾದರೆ ಕನ್ನಡವನ್ನು ಬಳಸಬೇಕು. ಕುವೆಂಪು ವಿರಚಿತ ನಾಡಗೀತೆ ನಮ್ಮೆಲ್ಲರ ಹೆಮ್ಮೆಯಾಗಿದೆ ಎಂದು ಹೇಳಿದರು.



ಲಕ್ಷ್ಮೇಶ್ವರ ತಾಲೂಕಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಕಳಸಾಪುರ ಮಾತನಾಡಿ, ನಿಗದಿಪಡಿಸಿದ ಧಾಟಿಯಲ್ಲಿ, ಅವಧಿಯಲ್ಲಿ ಹಾಡುವ ಮೂಲಕ ನಾಡಗೀತೆಯ ಶ್ರೇಷ್ಠತೆ, ವಿಶೇಷತೆಯನ್ನು ನಾವೆಲ್ಲ ಎತ್ತಿ ಹಿಡಿಯಬೇಕಾಗಿದೆ ಎಂದರು.

ಗ್ರೇಡ್ 2 ವಿಶೇಷ ತಹಸೀಲ್ದಾರ್ ಮಂಜುನಾಥ್ ಅಮಾಸಿ ಭುವನೇಶ್ವರಿಯ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು. ಮುಖ್ಯ ಅತಿಥಿಗಳಾಗಿ ಶಿಕ್ಷಣಾಧಿಕಾರಿಗಳ ಸಂಘದ ಅಧ್ಯಕ್ಷ ಎಸ್.ಕೆ. ಹವಾಲ್ದಾರ, ಸೇವಂತ್ ಡೇ ಶಾಲೆಯ ವೈಜನಾಥ ಮಾತನಾಡಿದರು. ಪ್ರಾಚಾರ್ಯ ಅಶೋಕ ಪೀಟರ, ಬಿ.ಸಿ. ಪಟ್ಟೇದ, ಡಾ. ಅರ್ಜುನ ವಠಾರದ, ಎಚ್.ಎಂ. ಗುತ್ತಲ ಪಾಲ್ಗೊಂಡಿದ್ದರು.

ಸೆವೆಂತ್ ಡೇ ಶಾಲೆಯ ಶಿಕ್ಷಕಿಯರು ಪ್ರಾರ್ಥಿಸಿದರು. ಸಿ.ಆರ್.ಪಿ ಸತೀಶ ಬೋಮಲೆ ಸ್ವಾಗತಿಸಿದರು. ಉಮೇಶ ನೇಕಾರ ನಿರೂಪಿಸಿದರು. ಎನ್.ಎ. ಮುಲ್ಲಾ ವಂದಿಸಿದರು. ಕಸಾಪ ದ ನಾಗರಾಜ್ ಮಜ್ಜಿಗುಡ್ಡ, ಈರಣ್ಣ ಗಾಣಿಗೇರ ನಾಡಗೀತೆ ಗಾಯನ ಸ್ಪರ್ಧೆ ನಡೆಸಿಕೊಟ್ಟರು. ಲಕ್ಷ್ಮೇಶ್ವರ ಪಟ್ಟಣ ವ್ಯಾಪ್ತಿಯ 13 ಪ್ರೌಢಶಾಲೆಗಳಿಂದ 52ಕ್ಕೂ ಅಧಿಕ ವಿದ್ಯಾರ್ಥಿಗಳು ಸ್ಪರ್ಧಿಗಳಾಗಿ ಭಾಗವಹಿಸಿದ್ದರು.

### ಸ್ಪರ್ಧೆಯ ಫಲಿತಾಂಶ

ಬಿ.ಸಿ.ಎನ್ ಆಂಗ್ಲ ಮಾಧ್ಯಮ ಪ್ರೌಢಶಾಲೆ (ಪ್ರಥಮ), ಲಿಟಲ್ ಹಾರ್ಟ್ಸ್ ಇಂಟರ್ನ್ಯಾಷನಲ್ ಸ್ಕೂಲ್ (ದ್ವಿತಿಯ), ಯೂನಿಕ್ ಆಂಗ್ಲ ಮಾಧ್ಯಮ ಶಾಲೆ (ತೃತೀಯ) ಬಹುಮಾನ ಪಡೆದುಕೊಂಡಿತು.

ಪ್ರಾಸ್ತಾವಿಕವಾಗಿ ಮಾತನಾಡಿದ ಕಸಾಪ ತಾಲೂಕಾಧ್ಯಕ್ಷ ಅಧ್ಯಕ್ಷ ಈಶ್ವರ ಮೆಡ್ಲೇರಿ, 1924-25ರ ಸಂದರ್ಭದಲ್ಲಿ ರಾಷ್ಟ್ರಕವಿ ಕುವೆಂಪು ಅವರಿಂದ ಜೈ ಭಾರತ ಜನನಿಯ ತನುಜಾತೆ ಗೀತೆ ರಚನೆಯಾಯಿತು. ಅದಕ್ಕೆ ಈಗ ನೂರರ ಸಂಭ್ರಮ. ಕರ್ನಾಟಕದ ಶ್ರೇಷ್ಠತೆ, ಏಕತೆಯನ್ನು ಸಾರುವ ನಮ್ಮ ನಾಡಗೀತೆಯನ್ನು ಯಾವುದೇ ಅಭಾಸಗಳಿಲ್ಲದೆ ಹಾಡುವಂತಾಗಬೇಕು ಎಂಬ ಕಾರಣದಿಂದ ಈ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಪ್ರಭುಗೌಡ ಯಕ್ಕಿಕೊಪ್ಪ, ಎಚ್.ಎಂ. ಸಪ್ಪಿನ, ಪಿ.ಎಲ್. ಪಾಟೀಲ, ವೀರಣ್ಣ ಕಮ್ಮಾರ, ಸುವರ್ಣ ಹಡಗಲಿ, ಕೆಂಚಕ್ಕನವರ, ಬಸಿರ್ ಅಹಮದ್ ಚೌರಿ ಹಾಜರಿದ್ದರು. ಮಲ್ಲಿಕಾರ್ಜುನ ಕಳಸಾಪೂರ ಮತ್ತು ಡಾ. ಅರ್ಜುನ ವಠಾರದ ನಿರ್ಣಾಯಕರಾಗಿದ್ದರು.

## ಎಸ್‌ಎಸ್‌ಕೆ ಸಮಾಜ ಹಿಂದೂ ಧರ್ಮವನ್ನು ಗಟ್ಟಿಗೊಳಿಸುತ್ತಿದೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತ ದೇಶದಲ್ಲಿ ದಂಡೆತ್ತಿ ಬಂದ ದಾಳಿಕೋರರನ್ನು ಎದುರಿಸಿ ಅವರನ್ನು ಸೋಲಿಸಿ ಹಿಂದೂ ಧರ್ಮವನ್ನು ರಕ್ಷಣೆ ಮಾಡುವಲ್ಲಿ ಎಸ್‌ಎಸ್‌ಕೆ ಸಮಾಜದ ಕೊಡುಗೆ ಅಪಾರವಾಗಿದೆ ಎಂದು ಬಿಜೆಪಿ ಪ್ರಕೋಷ್ಠದ ಜಿಲ್ಲಾ ಸಹ ಸಂಯೋಜಕ ರಮೇಶ ಸಜ್ಜಗಾರ ಹೇಳಿದರು.

ನಗರದ ಜೋಡ ಮಾರುತಿ ದೇವಸ್ಥಾನದ ಎದುರಿನ ಕಿಲ್ಲಾ ಓಣಿಯಲ್ಲಿ ಎಸ್‌ಎಸ್‌ಕೆ ಸಮಾಜ ಬಾಂಧವರು ಹಮ್ಮಿಕೊಂಡ ಸಹಸ್ರಾರ್ಜುನ ಮಹಾರಾಜರ ಜಯಂತಿಯಲ್ಲಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಭಾರತವು ಶಾಂತಿಯ ತವರೂರು. ಸಾಮರಸ್ಯ ಹೊಂದಿದ ದೇಶದಲ್ಲಿ ಸಹಸ್ರಾರ್ಜುನ ಮಹಾರಾಜರು ಜನಿಸಿರುವದು ನಮ್ಮೆಲ್ಲರಿಗೂ ಹೆಮ್ಮೆಯ ವಿಷಯವಾಗಿದೆ. ಜಿಲ್ಲೆಯಲ್ಲಿ ಎಸ್‌ಎಸ್‌ಕೆ ಸಮಾಜ ಬಾಂಧವರು ಧಾರ್ಮಿಕ ಕಾರ್ಯಕ್ರಮಗಳನ್ನು ಸಂಘಟಿಸಿ ಅಚ್ಚುಕಟ್ಟಾಗಿ ಮಾಡುವ ಮೂಲಕ ಹಿಂದೂ ಧರ್ಮವನ್ನು ಗಟ್ಟಿಗೊಳಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತಿದ್ದಾರೆ. ನನ್ನ ಒಡನಾಟವು ಎಸ್‌ಎಸ್‌ಕೆ ಸಮಾಜದವರೊಂದಿಗೆ ಹೆಚ್ಚಾಗಿದೆ ಎಂದರು.

ಗದಗ ಶಹರ ಪೊಲೀಸ್ ಠಾಣೆಯ ಸಿಪಿಐ ಡಿ.ಬಿ. ಪಾಟೀಲ ಮಾತನಾಡಿ, ಎಸ್‌ಎಸ್‌ಕೆ ಸಮಾಜ ಬಾಂಧವರು ಸಹಸ್ರಾರ್ಜುನ ಮಹಾರಾಜರ ಜಯಂತಿಯನ್ನು ಅತ್ಯಂತ ಶಿಸ್ತು ಮತ್ತು ಶಾಂತಿಯುತವಾಗಿ ಆಚರಿಸಿಕೊಂಡು ಬಂದಿರುವದು ಎಲ್ಲರ ಮೆಚ್ಚುಗೆ ಪಡೆದಿದೆ. ಇದೇ ರೀತಿ ಎಲ್ಲ ಸಮುದಾಯಗಳು ದಾರ್ಶನಿಕ ಮಹಾಪುರುಷರ ಜಯಂತಿಗಳನ್ನು ಶಾಂತಿಯುತವಾಗಿ ಆಚರಿಸುವ ಮೂಲಕ ಗದಗ ಜಿಲ್ಲೆಯನ್ನು ಮಾದರಿಯನ್ನಾಗಿ ಮಾಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ರಿಯಲ್ ಎಸ್ಟೇಟ್ ಉದ್ಯಮಿ ಸುಧೀರ ಕಾಟಿಗರ, ಓಣಿಯ ಹಿರಿಯರಾದ ಪರಶುರಾಮಸಾ ಬದಿ, ರಾಜು ಕಾಟಿಗರ, ಮೇಘರಾಜಸಾ ಬಾಕಳೆ, ವೆಂಕಟೇಶ ಬಾಂಡಗೆ, ಬಾಬು ಕಾಟಿಗರ, ಮಾಧು ಬದಿ, ಪ್ರಕಾಶ ಕಾಟಿಗರ, ಸುನೀಲ ಬಸವಾ, ಗಜಾನನ ಹಬೀಬ, ಚೇತನ ಲದ್ವಾ, ನಾರಾಯಣ ಟಿಕಣದಾರ ಮುಂತಾದವರು ಉಪಸ್ಥಿತರಿದ್ದರು. ಶ್ರೀಕಾಂತ ಬಾಕಳೆ ನಿರೂಪಿಸಿದರು. ರವಿ ಚವ್ಹಾಣ ವಂದಿಸಿದರು.

## ಬೆಟಗೇರಿಯಲ್ಲಿ ಅದ್ಧೂರಿ ಕನ್ನಡ ರಾಜ್ಯೋತ್ಸವ

**■ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಬೆಟಗೇರಿ ರಾಜ್ಯೋತ್ಸವ ಸಮಿತಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಮಹಾರಾಣಾ ಪ್ರತಾಪಸಿಂಹ ಶಿಕ್ಷಣ ಸಂಸ್ಥೆ ಹಾಗೂ ಸಾರ್ವಜನಿಕರ ಆಶ್ರಯದಲ್ಲಿ ಕಳೆದ 28 ವರ್ಷಗಳಿಂದ ಕರ್ನಾಟಕ ರಾಜ್ಯೋತ್ಸವ ಆಚರಿಸುತ್ತ ಬಂದಿದ್ದು, ಪ್ರಸ್ತುತ ಸಾಲಿನ ಕರ್ನಾಟಕ ರಾಜ್ಯೋತ್ಸವವನ್ನು ನವೆಂಬರ್ 1ರಂದು ಅದ್ಧೂರಿಯಾಗಿ ಆಚರಿಸಲಾಗುವುದು.

ಬೆಟಗೇರಿ ಶಾಲಾ-ಕಾಲೇಜುಗಳ ಆಕರ್ಷಕ ರೂಪಕಗಳೊಂದಿಗೆ ತಾಯಿ ಭುವನೇಶ್ವರಿ ಭಾವಚಿತ್ರದ ಮೆರವಣಿಗೆ ನಡೆಯಲಿದೆ. ಈ ಮೆರವಣಿಗೆಯಲ್ಲಿ ಬೆಟಗೇರಿಯ ಎಲ್ಲ ವಿದ್ಯಾರ್ಥಿಗಳು, ಶಾಲಾ-ಕಾಲೇಜು ಮುಖ್ಯಸ್ಥರು, ಶಿಕ್ಷಕರು, ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಪಾಲ್ಗೊಳ್ಳಲಿದ್ದಾರೆ.

ಅಂದು ಮುಂಜಾನೆ 8.30 ಗಂಟೆಗೆ ನಡೆಯುವ ಕಾರ್ಯಕ್ರಮಕ್ಕೆ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಬೆಟಗೇರಿಯ ಎಲ್ಲ ನಗರಸಭಾ ಸದಸ್ಯರು, ಡಿ.ಡಿ.ಪಿಐ, ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿಗಳು ಪಾಲ್ಗೊಳ್ಳುರು.

ಕಾರ್ಯಕ್ರಮದಲ್ಲಿ ಸಾರ್ವಜನಿಕರು, ಶಾಲಾ-ಕಾಲೇಜು ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ರಾಜ್ಯೋತ್ಸವ ಸಮಿತಿ ಅಧ್ಯಕ್ಷ ಗಣೇಶಸಿಂಗ ಬ್ಯಾಳಿ ವಿನಂತಿಸಿದ್ದಾರೆ.



## ಮೂಲಭೂತ ಸೌಲಭ್ಯ ಒದಗಿಸಲು ಆಗ್ರಹ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಬಸವೇಶ್ವರ ನಗರದಲ್ಲಿನ ನಿವಾಸಿಗಳು ಗುರುವಾರ ಪುರಸಭೆಗೆ ದೌಡಾಯಿಸಿ ಬಸವೇಶ್ವರ ನಗರಕ್ಕೆ ಕುಡಿಯುವ ನೀರು ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವಂತೆ ಆಗ್ರಹಿಸಿ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ ಅವರಿಗೆ ಮನವಿ ಅರ್ಪಿಸಿದರು.

ಈ ವೇಳೆ ನಿವೃತ್ತ ಎಎಸ್‌ಐ ಎಸ್.ಆರ್. ಈಳಗೇರ ಮತ್ತು ನಿವೃತ್ತ ಸೈನಿಕ ಸಿ.ಎ. ಹುಡೇದ ಮಾತನಾಡಿ, ಕಳೆದ 33 ವರ್ಷಗಳ ಹಿಂದೆ ಪಟ್ಟಣದ ಹೊಸ ಬಸ್ ನಿಲ್ದಾಣದ ಪಕ್ಕದಲ್ಲಿರುವ ಬಸವೇಶ್ವರ ಲೇಔಟ್ ನಿರ್ಮಾಣವಾಗಿದೆ. ಆದರೆ ಇಲ್ಲಿ ಒಂದು ಕಡೆಯಲ್ಲಿಯೂ ಸರಿಯಾದ ರಸ್ತೆ, ಚರಂಡಿ, ಸೇರಿದಂತೆ ಯಾವುದೇ ಮೂಲ ಸೌಲಭ್ಯ ಕಲ್ಪಿಸಿಲ್ಲ. ಬಸವೇಶ್ವರ ನಗರಕ್ಕೆ ಕಳೆದ 1 ತಿಂಗಳಿಂದ ಕುಡಿಯುವ ನೀರು ಸಮರ್ಪಕವಾಗಿ ಪೂರೈಕೆಯಾಗುತ್ತಿಲ್ಲ. ನೀರಿಗಾಗಿ ಪುರಸಭೆಗೆ ಹಿಡಿಶಾಪ ಹಾಕುವಂತಾಗಿದೆ.

ಪುರಸಭೆಗೆ ಅತಿ ಹೆಚ್ಚು ತೆರಿಗೆ ಕಟ್ಟುವ ಬಸವೇಶ್ವರ ನಗರದ ನಿವಾಸಿಗಳು ಯಾವ ತಪ್ಪು ಮಾಡಿದ್ದಾರೆ? ಚರಂಡಿಗಳು ಗಲೀಜಿನಿಂದ ತುಂಬಿ ತುಳುಕುತ್ತಿದ್ದರೂ ಕಸದ ತೆಗೆದುಕೊಂಡು ಹೋಗುವ ವಾಹನಗಳು ಬರುತ್ತಿಲ್ಲ. ಬಸ್ ನಿಲ್ದಾಣದ ಸುತ್ತಮುತ್ತಲಿನ ಅಂಗಡಿಯವರು ತ್ಯಾಜ್ಯಗಳನ್ನು ಬಸವೇಶ್ವರ ನಗರಕ್ಕೆ ಹೋಗುವ ರಸ್ತೆಯ ಅಕ್ಕ ಪಕ್ಕದಲ್ಲಿ ತಂದು ಹಾಕುತ್ತಾರೆ. ಇದರಿಂದ ಬಸವೇಶ್ವರ ನಗರಕ್ಕೆ ಹೋಗುವ ಮತ್ತು ಬರುವ ಜನರು ಮೂಗು ಮುಚ್ಚಿಕೊಂಡು ಓಡಾಡುವ ಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು.

ಕುಡಿಯುವ ನೀರು ಇಲ್ಲದೆ ಜೀವನ ಸಾಗಿಸುವುದು ಅಸಾಧ್ಯ. ಬಸವೇಶ್ವರ ನಗರದಲ್ಲಿ ಹೆಚ್ಚಾಗಿ ನೌಕರಿ ಮಾಡುವವರು ಹಾಗೂ ನಿವೃತ್ತ ನೌಕರರು ವಾಸ ಮಾಡುತ್ತಿದ್ದಾರೆ. ಪದೇ ಪದೇ ಪುರಸಭೆಗೆ ಬಂದು ಮನವಿ ಸಲ್ಲಿಸಿದರೂ ಯಾವುದೇ ರೀತಿ ಸ್ಪಂದನೆ ಸಿಗುತ್ತಿಲ್ಲ ಎಂದು ಆರೋಪಿಸಿದರು. ಈ ವೇಳೆ ಬಿ.ಎಫ್. ಉಪ್ಪಾರ, ಎಸ್.ಎಸ್. ಪ್ರಸಾದ, ರಿಯಾಜ್ ಲಕ್ಷ್ಮೇಶ್ವರ, ಎಂ.ಎ. ಬಳ್ಳಾರಿ, ಗುರುನಾಥ ಗಜೇಂದ್ರಗಡ, ಸಿದ್ದಣ್ಣ ಬಣಕಾರ, ಕಲಾವತಿ ಮುದಗಲ್ಲ, ಗೀತಾ ಹೆರೂರ, ತನುಜಾ ಪ್ರಸಾದ ಮುಂತಾದವರು ಇದ್ದರು.

## ರಾಜ್ಯ ಮಟ್ಟಕ್ಕೆ ಆಯ್ಕೆ




**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ವಿಜಯ ಲಲಿತ ಕಲಾ ಸಂಸ್ಥೆಯ ವಿಜಯ ಪದವಿ ಪೂರ್ವ ಮಹಾವಿದ್ಯಾಲಯದ ವಿದ್ಯಾರ್ಥಿನಿಯಾದ ರಂಜಿತಾ ದಾವಣಗೇರೆ ಜಿಲ್ಲಾ ಮಟ್ಟದ ವೈಯಕ್ತಿಕ ಆಟವಾದ 400 ಮೀಟರ್ ಅಡೆತಡೆ ಓಟದಲ್ಲಿ ದ್ವಿತೀಯ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿ ಮಹಾವಿದ್ಯಾಲಯಕ್ಕೆ ಕೀರ್ತಿ ತಂದಿದ್ದಾಳೆ.

ಈ ವಿದ್ಯಾರ್ಥಿಯ ಸಾಧನೆಯನ್ನು ಅಭಿನಂದಿಸಿ, ಮುಂದಿನ ರಾಜ್ಯ ಮಟ್ಟದ ಸ್ಪರ್ಧೆಗಳಲ್ಲಿ ಯಶಸ್ಸು ಗಳಿಸಲೆಂದು ಸಂಸ್ಥೆಯ ಆಡಳಿತ ಮಂಡಳಿಯ ಅಧ್ಯಕ್ಷ ಅಶೋಕ ಟಿ.ಅಕ್ಕಿ, ಕಾರ್ಯದರ್ಶಿ ಸಂತೋಷ ಅಕ್ಕಿ, ಪ್ರ. ಪ್ರಾಚಾರ್ಯರಾದ ಶಿಲ್ಪಾ ಮಲ್ಲಾಪೂರ ಹಾಗೂ ಸಿಬ್ಬಂದಿ ವರ್ಗದವರು ಹಾರೈಸಿದ್ದಾರೆ.

## ಸದಾಫ ತಹಸೀಲ್ದಾರಗೆ ಚಿತ್ರಕಲೆಯಲ್ಲಿ ಪ್ರಶಸ್ತಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಇತ್ತೀಚೆಗೆ ಪ್ರಾಥಮಿಕ ಮತ್ತು ಪ್ರೌಢಶಾಲೆಯ ವಿದ್ಯಾರ್ಥಿಗಳಿಗಾಗಿ ಪ್ರತಿಭಾ ವಿಹಾರ ಅಕಾಡೆಮಿ ಹೊಸದೆಹಲಿ ಇವರ ಸಂಯುಕ್ತ ಆಶ್ರಯದಲ್ಲಿ 6ನೇ ವರ್ಷದ ಇಂಟರ್‌ನ್ಯಾಷನಲ್ ಆರ್ಟ್ & ಎಕ್ಸಿಬಿಷನ್ ಹಮ್ಮಿಕೊಳ್ಳಲಾಗಿತ್ತು.

ಸ್ಪರ್ಧೆಯಲ್ಲಿ ರಾಯಲ್ ಇಂಗ್ಲಿಷ್ ಮೀಡಿಯಂ ಶಾಲೆಯ ವಿದ್ಯಾರ್ಥಿನಿ ಸದಾಫ ಖಾದರಸಾಬ ತಹಸೀಲ್ದಾರ ಪರಿಸರ ಮಾಲಿನ್ಯಕ್ಕೆ ಸಂಬಂಧಿಸಿದ ಚಿತ್ರವನ್ನು ರಚಿಸಿ ಕಲಾಪದಕ ಮತ್ತು ಪ್ರಶಸ್ತಿ ಫಲಕವನ್ನು ಪಡೆದಿದ್ದಾಳೆ. ಈ ವಿದ್ಯಾರ್ಥಿನಿಗೆ ತರಬೇತಿ ನೀಡಿದ ಕಲಾವಿದ ಜಾಕೀರಹುಸೇನ ಮತ್ತು ವಿದ್ಯಾರ್ಥಿನಿಗೆ ನಗರದ ಎಂ.ಕೆ.ಕೆ. ಫೌಂಡೇಶನ್ ಟ್ರಸ್ಟ್ ಅಧ್ಯಕ್ಷರು, ಸರ್ವ ಸದಸ್ಯರು, ಸಿಬ್ಬಂದಿ ವರ್ಗ ಹಾಗೂ ರಾಯಲ್ ಇಂಗ್ಲಿಷ್ ಮೀಡಿಯಂ ಶಾಲಾ ಸಿಬ್ಬಂದಿಗಳು ಹಾರ್ದಿಕ ಅಭಿನಂದನೆ ತಿಳಿಸಿದ್ದಾರೆ.




## ಗ್ರಾಮ ಪಂಚಾಯತ ಕಾರ್ಯಾಲಯ, ವಡವಿ

ತಾಲೂಕ :- ಶಿರಹಟ್ಟಿ ಜಿಲ್ಲಾ:- ಗದಗ

ಸಂ.ಗ್ರಾ.ಪಂಹೆ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2025-26 ದಿನಾಂಕ:30-10-2025

### ದರಪಟ್ಟಿ ಪ್ರಕಟಣೆ

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ವಡವಿ ಇವರು 2025-26ನೇ ಸಾಲಿನ ಮಹಾತ್ಮ ಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರ್ಮಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿ ಹೆಸರು | ಕಾಮಗಾರಿಯ ಸಂಖ್ಯೆ | ಕಾಮಗಾರಿಯ ಅಂದಾಜು ಮೊತ್ತ ಲಕ್ಷಗಳಲ್ಲಿ | ಕಾಮಗಾರಿಗಳಿಗೆ ಪರೈಸಬೇಕಾದ ಸಾಮಗ್ರಿ ಮೊತ್ತ ರೂಗಳಲ್ಲಿ |
|---|---|---|---|---|
| 1 | ವಡವಿ ಗ್ರಾಮದ ಬಸವರಾಜ ಮುಂಡವಾಡ ಮನೆಯಿಂದ ಜೆ ಜೆ ಎಮ್ ನೀರಿನ ಟ್ಯಾಂಕಿನ ವರೆಗೆ ಮೊರಂ ರಸ್ತೆ ನಿರ್ಮಣ | 1243711 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 2. | ವಡವಿ ಗ್ರಾಮದ ಕವಿತಾ ಗುಳೇದ ಮನೆಯಿಂದ ಹೆಬ್ಬಾಳ ರಸ್ತಿಯಲ್ಲಿರುವ ಶಿವಪ್ಪ ತಳವಾರ ಹೊಲದ ವರೆಗೆ ಮೊರಂ ರಸ್ತೆ ನಿರ್ಮಾಣ | 438681 | 500 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ;-31/10/2025 ರಿಂದ 10/11/2025 ರವರೆಗೆ

ಭರ್ತಿ ಮಾಡಿ ದರಪಟ್ಟಿ ಫಾರಂ ಸಲ್ಲಿಸುವ ದಿನಾಂಕ:-10/11/2025, ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ;-10/11/2025 ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.00 ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ:-11/11/2025 ರ ಬೆಳಿಗ್ಗೆ 11.00 ಗಂಟೆ

**ನಿಬಂಧನೆಗಳು**

1) ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ವಡವಿ ಯಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ ಆಗಿದೆ/-
**ಪಂಚಾಯತ ಅಭಿವೃದ್ಧಿ ಅಧಿಕಾರಿ,**
**ಗ್ರಾಮ ಪಂಚಾಯತ, ವಡವಿ**

ಸಹಿ ಆಗಿದೆ/-
**ಅಧ್ಯಕ್ಷರು,**
**ಗ್ರಾಮ ಪಂಚಾಯತ, ವಡವಿ**



ಕರ್ನಾಟಕ ಸರ್ಕಾರ

## ಪುರಸಭೆ ಕಾರ್ಯಾಲಯ, ಗಜೇಂದ್ರಗಡ

ಕ್ರಸಂ:ಪುಸಗ/ಕಾವಿ/ಎಸ್‌ಎಫ್‌ಸಿ/ಸಾ.ನಿ/ಎಸ್.ಎಫ್.ಸಿ ಕುನೀಸಪ/ಇ-ಟೆಂಡರ್ ಪ್ರಕಟಣೆ/ವಹಿ/2025-26
ದಿನಾಂಕ:27-10-2025

**(ಅಲ್ಪಾವಧಿ ಟೆಂಡರ್ ಪ್ರಕಟಣೆ - ಕೆಪಿಪಿಪಿ ಪೋರ್ಟಲ್ ಮೂಲಕ)**

ಕರ್ನಾಟಕ ಪಾರದರ್ಶಕತೆ ಅಧಿನಿಯಮ-2000ರ ಪ್ರಕಾರ "ಇ-ಪ್ರ್ಯೂಕ್ಯೂರ್‌ಮೆಂಟ್" ಪದ್ಧತಿಯಲ್ಲಿ ಗಜೇಂದ್ರಗಡ ಪುರಸಭೆಗೆ ಸನ್-2024-25ನೇ ಸಾಲಿನ SFC ಯೋಜನೆಯ ಕುನೀಸಪ ವಿವರ ಕೆಳಗಿನಂತಿದೆ.

| | |
|---|---|
| 1 | DMA/2025-26/WS/WORK_INDENT50677 ರೂ.3.00ಲಕ್ಷ (OTHERS) |
| 2 | ಸನ್-2025-26ನೇ ಸಾಲಿನ SFC ಯೋಜನೆಯ ಕುನೀಸಪ DMA/2025-26/WS/WORK_INDENT50672(SC) ರೂ.6.00ಲಕ್ಷ |
| 3 | SFC SCSP DMA/2025-26/WS/WORK_INDENT50676 ರೂ.5.12ಲಕ್ಷ (OTHERS) |
| 4 | SFC TSP DMA/2025-26/WS/WORK_INDENT20551 ರೂ.2.24ಲಕ್ಷ (OTHERS) |
| 5 | SFC 7.25% DMA/2025-26/WT/WORK_INDENT50547 ರೂ.0.80ಲಕ್ಷ (SC) |
| 6 | SFC 5% DMA/2025-26/OW/WORK_INDENT50680 ರೂ.0.55ಲಕ್ಷ (OTHERS) |
| 7 | MF DMA/2025-26/OW/WORK_INDENT50552 ರೂ.1.87ಲಕ್ಷ II(A) |
| 8 | MF 5% DMA/2025-26/OW/WORK_INDENT50554 ರೂ.1.12ಲಕ್ಷ II(A) |
| 9 | MF 7.25% DMA/2025-26 /OW/WORK_INDENT505555 ರೂ.1.62ಲಕ್ಷ (OTHERS) |
| 10 | MF TSP DMA/2025-26 /OW/WORK_INDENT505556 ರೂ.0.52ಲಕ್ಷ (OTHERS) |

ಒಟ್ಟು ರೂ.22.84ಲಕ್ಷ ಅನುಷ್ಠಾನಕ್ಕಾಗಿ ಕೆ.ಡಬ್ಲ್ಯು-1, ದಸ್ತಾವೇಜ್‌ನಲ್ಲಿ https://kppp.karnataka.gov.in/ ಪೋರ್ಟಲ್‌ನಲ್ಲಿ ನೊಂದಾಯಿಸಲ್ಪಟ್ಟ ಮತ್ತು ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರಿಂದ ಟೆಂಡರ್‌ನ್ನು ಅಹ್ವಾನಿಸಲಾಗಿದೆ. ಕೆಪಿಪಿಪಿ ಪೋರ್ಟಲ್ ದಾಖಲೆಗಳಿಗಾಗಿ https://kppp.karnataka.gov.inರ ಮೂಲಕ ಕೆಳಗೆ ನಮೂದಿಸಿರುವ ದಿನಾಂಕದಂದು ಆನ್‌ಲೈನ್ ಮೂಲಕವೇ ಟೆಂಡರ್ ಸಲ್ಲಿಸುವುದು. 1) ಕೆಪಿಪಿಪಿ ಪೋರ್ಟಲ್ ಪದ್ಧತಿಯಲ್ಲಿ ಟೆಂಡರ್ ಸಲ್ಲಿಸುವ ಕೊನೆಯ **ದಿನಾಂಕ: 05-11-2025ರ ಸಾಯಂಕಾಲ 4.00** ಗಂಟೆಯವರೆಗೆ, 2) ಟೆಂಡರ್ ತೆರೆಯುವ **ದಿನಾಂಕ: 06-11-2025ರ ಸಾಯಂಕಾಲ 4.30** ಗಂಟೆಗೆ ನಿಗಧಿಪಡಿಸಿದ ದಿನಾಂಕಗಳು ಒಂದು ವೇಳೆ ರಜಾ ದಿನಗಳನ್ನಾಗಿ ಘೋಷಿಸಲ್ಪಟ್ಟರೆ ಮುಂದಿನ ದಿನಾಂಕವನ್ನು ಪರಿಗಣಿಸಲಾಗುವುದು. ಈ ಕಚೇರಿಯಲ್ಲಿ ಯಾವುದೇ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲಾ. ಕಾಮಗಾರಿ ಇ.ಎಮ್.ಡಿ ಪೂರ್ಣಗೊಳಿಸುವ ಅವಧಿ, ಗುತ್ತಿಗೆದಾರರ ದರ್ಜೆ ಹಾಗೂ ಇನ್ನಿತರ ಹೆಚ್ಚಿನ ಮಾಹಿತಿ ಹಾಗೂ ಷರತ್ತುಗಳಿಗೆ ಕಛೇರಿಯ ವೆಬ್‌ಸೈಟ್ https://kppp.karnataka.gov.in/ ಹಾಗೂ ಕಚೇರಿ ವೇಳೆಯಲ್ಲಿ ಸಂಬಂಧಿಸಿದ ಶಾಖೆಯಲ್ಲಿ ಮಾಹಿತಿಯನ್ನು ಪಡೆಯಬಹುದು. ಇ-ಪೋರ್ಟಲ್‌ನ ಎಲ್ಲ ಷರತ್ತುಗಳು ಅನ್ವಯಿಸುತ್ತವೆ ಹಾಗೂ ಟೆಂಡರ್ ಮಂಜೂರು ವ ನಾಮಂಜೂರ ಮಾಡುವ ಅಧಿಕಾರವನ್ನು ಪುರಸಭೆಯು ಕಾಯ್ದಿರಿಸಿಕೊಂಡಿದೆ.

**ಸಹಿ/-ಮುಖ್ಯಾಧಿಕಾರಿ**
**ಪುರಸಭೆ ಗಜೇಂದ್ರಗಡ**

**ಸಹಿ/-ಅಧ್ಯಕ್ಷರು**
**ಪುರಸಭೆ ಗಜೇಂದ್ರಗಡ**

**ವಾ.ಸಾ.ಇ/ಗದಗ/352/ದೇಶಪಾಂಡೆಪಬ್ಲಿಸಿಟಿ/2025-26**


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka